ಸಂಪುಟ : 10 ಸಂಚಿಕೆ: 228 ಪುಟ : 4+2 ಬೆಲೆ: 3.00 ಮಂಗಳವಾರ ಅಕ್ಟೋಬರ್ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 228 Pages : 4+2 Price : 3.00 Tuesday October 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಬೆಳೆ ನಷ್ಟ, ಬೆಲೆಯೇರಿಕೆಯ ಬಿಸಿಯ ನಡುವೆಯೇ ಹಬ್ಬದ ತಯಾರಿ

# ಬೆಳಕಿನ ಹಬ್ಬದ ಸಂಭ್ರಮಕ್ಕೆ ಸಿದ್ಧ






■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಗಾರಿನಲ್ಲಿನ ಅತಿವೃಷ್ಟಿಯಿಂದ ಬೆಳೆಹಾನಿಯಾಗಿ ರೈತರು ಸೇರಿ ಜನಸಾಮಾನ್ಯರು ಸಂಕಷ್ಟದಲ್ಲಿರುವ ಸಂದರ್ಭದ ನಡುವೆಯೂ ನಾಡಿನ ದೊಡ್ಡ ಹಬ್ಬ ದೀಪಾವಳಿಯನ್ನು ಸಂಪ್ರದಾಯಬದ್ಧವಾಗಿ ಸಡಗರ ಸಂಭ್ರಮದಿಂದಲೇ ಆಚರಿಸಲು ಅಣಿಯಾಗಿರುವುದು ಬೆಳಕಿನ ಹಬ್ಬದ ಸಂಭ್ರಮಕ್ಕೆ ಸಾಕ್ಷಿಯಾಗಿದೆ.

ವಿಶೇಷ ಪೂಜಾ ಸಾಮಗ್ರಿ, ಸಿರಾಮಿಕ್ ಮತ್ತು ಮಣ್ಣಿನ ಹಣತೆ, ಆಕಾಶ ಬುಟ್ಟಿ, ಅಲಂಕಾರಿಕ ವಸ್ತುಗಳು, ಹೂವು-ಹಣ್ಣು, ಹೊಸ ಬಟ್ಟೆ, ಮೊಬೈಲ್ ಸೇರಿ ಇಲೆಕ್ಟ್ರಾನಿಕ್ಸ್, ದಿನಸಿ, ಪೂಜಾ ಸಾಮಗ್ರಿ ಅಂಗಡಿಗಳ ಮುಂದೆ ಖರೀದಿ ಭರಾಟೆ ಜೋರಾಗಿಯೇ ನಡೆಯಿತು. ಬಣ್ಣದ ವಿದ್ಯುತ್ ದೀಪಗಳು ಮತ್ತು ಆಕರ್ಷಕ ವಿನ್ಯಾಸದ ಆಕಾಶಬುಟ್ಟಿಗಳಿಗೆ ಬೇಡಿಕೆ ಹೆಚ್ಚಿ ಮಾರುಕಟ್ಟೆ ಪ್ರದೇಶ ಕಳೆಗಟ್ಟಿತ್ತು. ಪಟ್ಟಣದ ಹೊಸ ಬಸ್ ನಿಲ್ದಾಣದಿಂದ ಹಾವಳಿ ಆಂಜನೇಯ ದೇವಸ್ಥಾನದವರೆಗಿನ ಮುಖ್ಯ ಬಜಾರ್ ರಸ್ತೆಯುದ್ದಕ್ಕೂ ಹಬ್ಬದ ಸಾಮಗ್ರಿಗಳ ಖರೀದಿ ಭರಾಟೆ ಜೋರಾಗಿಯೇ ನಡೆಯಿತು. ಇಟ್ಟಿಗೆರೆ ದಂಡೆಯ ಮೇಲೆ ಕಬ್ಬು, ಬಾಳೆ, ತಳಿರು-ತೋರಣ ಮಾರಾಟಕ್ಕೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿತ್ತು.

ಹಬ್ಬದ ಹಿನ್ನೆಲೆಯಲ್ಲಿ ಹೂವು, ಹಣ್ಣು, ಅಲಂಕಾರಿಕ ವಸ್ತುಗಳು, ಆಕಾಶಬುಟ್ಟಿ, ಪಟಾಕಿ, ದಿನಸಿ, ಬಟ್ಟೆ, ಆಭರಣ, ವಾಹನಗಳ ವ್ಯಾಪಾರ-ವಹಿವಾಟು ಜೋರಾಗಿಯೇ ನಡೆಯಿತು. ಹಬ್ಬದ ಸಾಮಗ್ರಿ ಖರೀದಿಗಾಗಿ ಮಾರುಕಟ್ಟೆಗೆ ಬಂದಿದ್ದ ಗ್ರಾಹಕರಿಗೆ ವಸ್ತುಗಳ ಬೆಲೆ ಏರಿಕೆ ಬಿಸಿ ತಟ್ಟಿತು. ಚೆಂಡು ಹೂವು ಕೆಜಿಗೆ 150 ರೂ, ಗಲಾಟೆ 200 ರೂ, ಸೇವಂತಿಗೆ 200-400 ರೂ, ಮಲ್ಲಿಗೆ, ಸುಗಂಧಿ, ಸೇವಂತಿ ಹೂವಿನ ಬೆಲೆ ಗಗನಕ್ಕೇರಿದ್ದವು. ಬಾಳೆ, ಕಬ್ಬು ಪ್ರತಿ ಜೋಡಿಗೆ 50 ರೂ ಮೇಲ್ಪಟ್ಟು ಮಾರಾಟವಾದವು. ಉಳಿದೆಲ್ಲ ಪೂಜಾ ಸಾಮಗ್ರಿಗಳ ಬೆಲೆಯಲ್ಲೂ ಹೆಚ್ಚಳ ಕಂಡು ಬಂದಿತು. ಮಣ್ಣಿನ ಹಣತೆಯ ಬದಲಿಗೆ ಚಿತ್ತಾಕರ್ಷಕ ಸೆರಾಮಿಕ್ ಹಣತೆಗಳು ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದವು.

ಹಬ್ಬದ ವ್ಯಾಪಾರಕ್ಕೆ ಪಟ್ಟಣ ಸೇರಿ ಸುತ್ತಲಿನ ನೂರಾರು ಗ್ರಾಮಗಳ ಜನರು ಬರುವುದರಿಂದ ಮುಖ್ಯ ಮಾರುಕಟ್ಟೆ ರಸ್ತೆಯಲ್ಲಿ ಟ್ರಾಫಿಕ್ ಸಮಸ್ಯೆ ಮಿತಿಮೀರಿತ್ತು. 2/3 ದಿನಗಳಿಂದ ಜನಸಂದಣಿಯಿಂದ ತುಂಬಿದ್ದು ಟ್ರಾಫಿಕ್ ಕಿರಿಕಿರಿ ತಪ್ಪಿಸುವಲ್ಲಿ ಪೊಲೀಸರು ಹರಸಾಹಸದ ನಡುವೆಯೂ ಜನಸಾಮಾನ್ಯರೂ ಪರದಾಡಬೇಕಾಯಿತು. ಕೆಲವು ರಸ್ತೆಗಳಲ್ಲಿ ಪಿಎಸ್ಐ ನಾಗರಾಜ ಗಡಾದ ನೇತೃತ್ವದಲ್ಲಿ ಪೊಲೀಸರು ಬ್ಯಾರಿಕೇಡ್ ಹಾಕಿ ವಾಹನಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಿ, ಸಂಚಾರ ದಟ್ಟಣೆಯನ್ನು ಹತೋಟಿಗೆ ತರಲು ಪ್ರಯತ್ನಿಸಿದರು.

ಸೋಮವಾರ ನರಕ ಚತುರ್ದಶಿ ಅಭ್ಯಂಗ ಸ್ನಾನ, ಹಿರಿಯರ ಹಬ್ಬ ಸಂಜೆ ಕೆಲವರು ▶▶ 3ನೇ ಪುಟಕ್ಕೆ

### ಪರಿಸರಕ್ಕೆ ಹಾನಿ ಮಾಡುವ ಪಟಾಕಿಗಳ ಮಾರಾಟ, ಬಳಕೆ ನಿಷೇಧ

# ಹಸಿರು ಪಟಾಕಿಗಳನ್ನೇ ಬಳಸಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಡರಗಿ ತಾಲೂಕಿನಲ್ಲಿ ಗದಗ ಜಿಲ್ಲಾಡಳಿತದ ಹಿರಿಯ ಅಧಿಕಾರಿಗಳ ನಿರ್ದೇಶನದಂತೆ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಸಿಡಿತದಿಂದ ಉಂಟಾಗುವ ಶಬ್ದ, ವಾಯು ಮಾಲಿನ್ಯ ನಿಯಂತ್ರಣದಲ್ಲಿಡಲು ಹಾಗೂ ಸಾರ್ವಜನಿಕ ಆಸ್ತಿ ಮತ್ತು ಆರೋಗ್ಯ ಸಂರಕ್ಷಣೆಯ ಹಿತದೃಷ್ಟಿಯಿಂದ ಭಾರತ ಸರ್ಕಾರದ ಪರಿಸರ (ಸಂರಕ್ಷಣಾ) ನಿಯಮಾವಳಿ 1986 ತಿದ್ದುಪಡಿ 1999 ಮತ್ತು 2000 ಅಡಿಯಲ್ಲಿ ನಿಗದಿಪಡಿಸಿರುವ ಮಾನಕಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸಾರ್ವಜನಿಕರು ಸಹಕರಿಸುವಂತೆ ಮುಂಡರಗಿ ತಾಲೂಕ ತಹಸೀಲ್ದಾರ ಯರಿಸ್ವಾಮಿ ಪಿ.ಎಸ್ ಕೋರಿದ್ದಾರೆ.

ಸರ್ವೋಚ್ಚ ನ್ಯಾಯಾಲಯವು ನೀಡಿದ ನಿರ್ದೇಶನದಲ್ಲಿ ಅನುಮತಿಸಿರುವ ಹಸಿರು ಪಟಾಕಿಗಳನ್ನು ಬಿಟ್ಟು ಉಳಿದ ಯಾವುದೇ ಪಟಾಕಿಗಳ ಮಾರಾಟ ಹಾಗೂ ಬಳಕೆಯನ್ನು ನಿಷೇಧಿಸಲಾಗಿದೆ. ಪಟಾಕಿ ಮಾರಾಟ ಮಾಡುವವರು ಹಾಗೂ ಪಟಾಕಿ ಸಂಗ್ರಹಿಸುವ ಗೋದಾಮುಗಳಿಗೆ ಸಂಬಂಧಪಟ್ಟ ಎಲ್ಲ ಇಲಾಖೆಯ ಅನುಮತಿ ಪಡೆಯತಕ್ಕದ್ದು.




ದಿನದ ಯಾವುದೇ ಸಮಯದಲ್ಲಿ ನಿಶ್ಶಬ್ದ ವಲಯಗಳೆಂದು ಘೋಷಿಸಲಟ್ಟಿರುವ ಸ್ಥಳಗಳಲ್ಲಿ ಆಸ್ಪತ್ರೆ, ಶಾಲೆ, ಪ್ರಾರ್ಥನಾ ಮಂದಿರ, ವೃದ್ಧಾಶ್ರಮಗಳ ಸುತ್ತ ಮುತ್ತ ಯಾವುದೇ ರೀತಿಯ ಶಬ್ದ ಉಂಟುಮಾಡುವ ಪಟಾಕಿ ಹಾಗೂ ಸಿಡಿಮದ್ದುಗಳ ಬಳಕೆಯನ್ನು ನಿಷೇಧಿಸಲಾಗಿದೆ.

ಯಾವುದೇ ಕ್ರಮಗಳನ್ನು ಉಲ್ಲಂಘಿಸಿರುವುದು ಕಂಡುಬಂದಲ್ಲಿ, ಅದಕ್ಕೆ ಕಾರಣರಾದವರ ಮೇಲೆ ಕಾಯ್ದೆಯನುಸಾರ ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಲಾಗುವುದು. ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಸಿಡಿತದಿಂದ ಉಂಟಾಗುವ ಶಬ್ದ ಹಾಗೂ ವಾಯು ಮಾಲಿನ್ಯ ನಿಯಂತ್ರಣದಲ್ಲಿಟ್ಟು ಹಬ್ಬವನ್ನು 'ಹಸಿರು ದೀಪಾವಳಿ-ಸ್ವಸ್ಥ ದೀಪಾವಳಿ: ಪರಿಸರ ಸ್ನೇಹಿ ದೀಪಾವಳಿ'ಯನ್ನಾಗಿ ಆಚರಿಸಲು ಸಾರ್ವಜನಿಕರು ಸಹಕರಿಸುವಂತೆ ಮುಂಡರಗಿ ತಹಸೀಲ್ದಾರ ಯರಿಸ್ವಾಮಿ ಪಿ.ಎಸ್ ಕೋರಿದ್ದಾರೆ.




125 ಡೆಸಿಬಲ್‌ಗಳಿಗಿಂತ ಹೆಚ್ಚು ಶಬ್ದ ಉಂಟುಮಾಡುವ ಪಟಾಕಿಗಳ ದಾಸ್ತಾನು, ಮಾರಾಟ ಹಾಗೂ ಉಪಯೋಗಿಸುವುದನ್ನು ಕಟ್ಟು ನಿಟ್ಟಾಗಿ ನಿಷೇಧಿಸಲಾಗಿದೆ. ಸರ್ವೋಚ್ಚ ನ್ಯಾಯಾಲಯವು ರಾತ್ರಿ 8ರಿಂದ 10 ಗಂಟೆಯವರೆಗೆ ಮಾತ್ರ ಪಟಾಕಿಗಳನ್ನು ಸಿಡಿಸಲು ಅವಕಾಶ ನೀಡಿದೆ. ಸರ್ವೋಚ್ಚ ನ್ಯಾಯಾಲಯ ಹಾಗೂ ಹಸಿರು ನ್ಯಾಯ ಪೀಠದ ಆದೇಶದಂತೆ ಎಲ್ಲ ಹಸಿರು ಪಟಾಕಿಗಳ ಪ್ಯಾಕೆಟ್ ಮೇಲೆ ಹಸಿರು ಪಟಾಕಿಯ ಚಿಹ್ನೆ ಹಾಗೂ ಕ್ಯೂಆರ್‌ಕೋಡ್ ಇರುವ ಹಸಿರು ಪಟಾಕಿ ಕಡಿಮೆ ಮಾಲಿನ್ಯ ಉಂಟುಮಾಡುವ ಪಟಾಕಿ ಮಾತ್ರ ಮಾರಾಟ ಮಾಡುವುದು.






## ವೈಜ್ಞಾನಿಕ ಪ್ರಯೋಗ ಪ್ರಾತ್ಯಕ್ಷಿಕೆ ಕಾರ್ಯಾಗಾರ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ರೋಟರಿ ಗದಗ ಸೆಂಟ್ರಲ್, ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ, ಜ. ತೋಂಟದಾರ್ಯ ಮಠ ಇವರ ಸಂಯುಕ್ತಾಶ್ರಯದಲ್ಲಿ ತಮಿಳುನಾಡಿನ ರೋಟರಿ ಸಂಸ್ಥೆ 3212 (ವಿರುಧನಗರ) ಪ್ರಾಯೋಜಿತ ವಿಜ್ಞಾನರಥ ವತಿಯಿಂದ ಜಗದ್ಗುರು ತೋಂಟದಾರ್ಯ ಮಠದ ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮ ಪ್ರೌಢಶಾಲೆಯಲ್ಲಿ ವೈಜ್ಞಾನಿಕ ಪ್ರಯೋಗ ಪ್ರಾತ್ಯಕ್ಷಿಕೆ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಮುಖ್ಯೋಪಾಧ್ಯಾಯ ಕೊಟ್ರೇಶ ಮೆಣಸಿನಕಾಯಿ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ರೋಟರಿ ಗದಗ ಸೆಂಟ್ರಲ್ ಅಧ್ಯಕ್ಷ ಚೇತನ ಅಂಗಡಿ, ಖಜಾಂಚಿ ಡಾ. ಪ್ರಭು ಗಂಜಿಹಾಳ, ಚಂದ್ರಗೌಡ ಹಿರೇಗೌಡರ, ಪ್ರಕಾಶ ಉಗಲಾಟ, ಮಧುಸೂದನ ಪುಣೇಕರ ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ಅಶ್ವಿನಿ ಜಗತಾಪ, ವೀಣಾ ಕಾವೇರಿ, ಮೀನಾಕ್ಷಿ ಕೊರವನವರ ಆಗಮಿಸಿದ್ದರು.

ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಮೂಡಿಸುವ ನಿಟ್ಟಿನಲ್ಲಿ ಅನಿಲ್ ಕುಮಾರ್ ಅವರು ವಿದ್ಯಾರ್ಥಿಗಳೊಂದಿಗೆ ಪ್ರಶ್ನೋತ್ತರಗಳ ಮೂಲಕ ಅವರಿಂದಲೇ ಪ್ರಯೋಗಗಳನ್ನು ಮಾಡಿಸಿ ವಿದ್ಯಾರ್ಥಿಗಳಲ್ಲಿ ವಿಜ್ಞಾನದಲ್ಲಿ ಆಸಕ್ತಿ ಮೂಡುವಂತೆ ಮಾಡಿದರು. ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಶಿಕ್ಷಕರು, ಸಿಬ್ಬಂದಿ ವರ್ಗ, ರೋಟರಿ ಸೆಂಟ್ರಲ್ ಗದಗ ಮತ್ತು ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಸದಸ್ಯರು ಪಾಲ್ಗೊಂಡಿದ್ದರು.

## ಹಬ್ಬದ ನೆಪದಲ್ಲಿ ಇಸ್ಪೀಟ್ ಆಡಿದರೆ ಕಠಿಣ ಕ್ರಮ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ದೀಪಾವಳಿ ಹಬ್ಬದ ಸಂದರ್ಭದಲ್ಲಿ ಜೂಜು, ಇಸ್ಪೀಟ್ ಮತ್ತಿತರ ಆಟಗಳನ್ನು ಆಡಿದರೆ, ಅಕ್ರಮ ಚಟುವಟಿಕೆಗಳನ್ನು ನಡೆಸಿದರೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್‌ಐ ಐಶ್ವರ್ಯ ನಾಗರಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದ ಮೇರೆಗೆ ಈ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ದೀಪಾವಳಿ ಪೂಜೆಯ ನಂತರ ಬಹಳಷ್ಟು ಜನ ದೀಪ ಕಾಯುವ ನೆಪದಲ್ಲಿ ಇಸ್ಪೀಟ್ ಮತ್ತಿತರ ಜೂಜಾಟಗಳನ್ನು ಆಡುವುದನ್ನು ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿದೆ. ಸಾರ್ವಜನಿಕ ಸ್ಥಳಗಳಲ್ಲಿ ಇಸ್ಪೀಟ್ ಆಡಿಸುವವರ ಮತ್ತು ಆಡುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮಗಳನನ್ನು ಜರುಗಿಸಲಾಗುವುದು. ಆದ್ದರಿಂದ ನರೇಗಲ್ಲ ಪೊಲೀಸ್ ಠಾಣಾ ವ್ಯಾಪ್ತಿಯ ಸಾರ್ವಜನಿಕರು ಈ ಪ್ರಕಟಣೆಯನ್ನು ಗಂಭೀರವಾಗಿ ಪರಿಗಣಿಸಿ, ಜಾಗರೂಕರಾಗಿರಬೇಕೆಂದು ತಿಳಿಸಲಾಗಿದೆ.

## ಮಲ್ಲಕಂಬ; ರಾಜ್ಯ ಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕಳಸಾಪುರದ ಸರಕಾರಿ ಪ್ರಾಥಮಿಕ ಶಾಲೆಯ 6ನೇ ತರಗತಿ ವಿದ್ಯಾರ್ಥಿನಿ ಶ್ರದ್ಧಾ ಪರಶುರಾಮ ಚಲವಾದಿ ಚಾಲುಕ್ಯ ಮಲ್ಲಕಂಬ ಅಕಾಡೆಮಿ ಗದಗ ಸಂಸ್ಥೆಯ ಸ್ಥಾಪಕ ಹಾಗೂ ತರಬೇತುದಾರ ವಿಜಯ ಎಂ.ಸಿ ಅವರ ಮಾರ್ಗದರ್ಶನದಲ್ಲಿ ಮಲ್ಲಕಂಬ ತರಬೇತಿಯನ್ನು ಪಡೆದು, ಇತ್ತೀಚೆಗೆ ಗದುಗಿನಲ್ಲಿ ನಡೆದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಜಿಲ್ಲಾ ಮಟ್ಟದ ಮಲ್ಲಕಂಬ ಸ್ಪರ್ಧೆಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾಳೆ.

ಸಾಧಕ ವಿದ್ಯಾರ್ಥಿನಿಗೆ ಚಾಲುಕ್ಯ ಮಲ್ಲಕಂಬ ಅಕಾಡೆಮಿಯ ಸ್ಥಾಪಕ ಹಾಗೂ ತರಬೇತುದಾರ ವಿಜಯ ಎಂ.ಸಿ ಶುಭ ಹಾರೈಸಿದ್ದಾರೆ.

### ಪ್ರಕೃತಿಯ ಆರಾಧನೆ, ಹಿರಿಯರ ಸ್ಮರಣೆ, ಪರಸ್ಪರ ಹಂಚಿ ತಿನ್ನುವ ಗುಣಗಳ ವಿಶೇಷ ಹಬ್ಬ

# ಬಂಜಾರ ಸಮಾಜದ ಪರಿಸರಸ್ನೇಹಿ 'ದವಾಳಿ'



ಬಂಜಾರರು ದೀಪಾವಳಿಯನ್ನು ವಿಶೇಷ ಮತ್ತು ಸಂಪ್ರದಾಯಬದ್ಧ ರೀತಿಯಲ್ಲಿ ಆಚರಿಸುತ್ತಾರೆ. ಈ ಹಬ್ಬದ ಆಚರಣೆಗಳಲ್ಲಿ ಯುವತಿಯರು ಮತ್ತು ಮಹಿಳೆಯರ ಪಾತ್ರ ದೊಡ್ಡದು. ಅವರು ಸಾಂಪ್ರದಾಯಿಕ ಉಡುಗೆಗಳನ್ನು ಧರಿಸಿ, ಹಾಡುತ್ತಾ, ನೃತ್ಯ ಮಾಡುತ್ತಾ ಹಬ್ಬವನ್ನು ಸಂಭ್ರಮಿಸುತ್ತಾರೆ. ಪಟಾಕಿ ಬದಲಿಗೆ ಪರಿಸರ ಸ್ನೇಹಿ ಆಚರಣೆಗಳಾದ ಎತ್ತುಗಳಿಗೆ ಅಲಂಕಾರ ಮಾಡುವುದು, ಕಣಗಲ ಹೂವು, ಶೇಂಗಾ, ಜೋಳ ಮುಂತಾದವುಗಳನ್ನು ಸಂಗ್ರಹಿಸುವುದು, ಸಪ್ತ ಮಾತೃಕೆಯರ ಪೂಜೆ, ಮತ್ತು ಪೂರ್ವಿಕರಿಗೆ ಗೌರವ ಸಲ್ಲಿಸುವುದು ಇವರ ಆಚರಣೆಗಳ ವಿಶೇಷತೆ.

ಅಭ್ಯಂಜನ, ಹೋಳಿಗೆ ಊಟ, ಪಟಾಕಿಗಳ ಚಿತ್ತಾರ... ದೀಪಾವಳಿ ಎಂದೊಡನೆ ಮನಸ್ಸಿನಲ್ಲಿ ಸುಳಿಯುವ ಚಿತ್ರಗಳಿವು. ಆದರೆ, ಇಂಥ ಆಚರಣೆಗಳಿಂದ ಹೊರತಾಗಿರುವ, ಬಂಜಾರರು ಆಚರಿಸುವ 'ದವಾಳಿ' ಹಬ್ಬವು ಪ್ರಕೃತಿಯ ಆರಾಧನೆ, ಹಿರಿಯರ ಸ್ಮರಣೆ, ಪರಸ್ಪರ ಹಂಚಿ ತಿನ್ನುವ ಗುಣ, ಸಕಲರಿಗೂ ಲೇಸು ಬಯಸುವ ಕಾರಣದಿಂದಾಗಿ ವಿಭಿನ್ನವಾಗಿ ಕಾಣುತ್ತದೆ.

ರಂಗು ರಂಗಿನ ಉಡುಪು ಮತ್ತು ವಿಶಿಷ್ಠ ಭಾಷೆಯ ಕಾರಣಕ್ಕಾಗಿ ಥಟ್ಟನೆ ಗಮನ ಸೆಳೆಯುವ ಬಂಜಾರರು (ಲಂಬಾಣಿ) ಮೂಲತಃ ಬುಡಕಟ್ಟು ಸಮುದಾಯದವರು. ಸಿಂಧು ಕಣಿವೆಯ ನಾಗರಿಕತೆಯೊಂದಿಗೆ ನಂಟು ಹೊಂದಿರುವಂಥ ಈ ಸಮುದಾಯ ವಿಶ್ವದ 114 ದೇಶಗಳಲ್ಲಿ ಲಂಬಾಣಿ, ಲಮಾಣಿ, ಲಬಾನ್, ಸುಗಾಲಿ ಹೀಗೆ ನಾನಾ ಹೆಸರುಗಳಲ್ಲಿ ಹರಿದು ಹಂಚಿಹೋಗಿದೆ. ಆಧುನಿಕ ಕಾಲಘಟ್ಟದಲ್ಲೂ ತಮ್ಮ ಸಾಂಸ್ಕೃತಿಕ ಅಸ್ಮಿತೆಯನ್ನು ಜೋಪಾನವಾಗಿರಿಸಿಕೊಂಡಿರುವ ಈ ಸಮುದಾಯದವರ ವಿಭಿನ್ನ ಆಚರಣೆಗಳು ಇಂದಿಗೂ ಗಮನ ಸೆಳೆಯುತ್ತವೆ. ಅಂಥ ಆಚರಣೆಗಳಲ್ಲಿ ವಿಶಿಷ್ಟವಾದದ್ದು ಬಂಜಾರರ 'ದವಾಳಿ' ಅರ್ಥಾತ್ ದೀಪಾವಳಿ.

ಪ್ರಕೃತಿ ಜತೆಗಿನ ಪ್ರೀತಿ, ಹಿರಿಯರ ಸ್ಮರಣೆ, ಪರಸ್ಪರ ಹಂಚಿ ತಿನ್ನುವ ಗುಣ, ಜಾನುವಾರುಗಳೆಡೆಗಿನ ಪ್ರೇಮ ಹಾಗೂ ಸಕಲರಿಗೂ ಲೇಸು ಬಯಸುವ ಗುಣ ಇವರು ಆಚರಿಸುವ ದವಾಳಿಯ ವಿಶೇಷ. ಕಾಳಿ ಅಮಾಸ್, ನಸಾಬ್, ಧಬುಕಾರ್, ಮೇರಾ, ಫೂಲ್ ತೋಡನ್, ಗೊದಣೋ, ಸಳೋಯಿ ಸೇವನೆ ಲಂಬಾಣಿಗರ ದವಾಳಿಯ ವಿಶಿಷ್ಟ ಆಚರಣೆಗಳು. ರಾಜ್ಯದ ಕೆಲವು ಜಿಲ್ಲೆಗಳನ್ನು ಹೊರತುಪಡಿಸಿ ಉತ್ತರ ಕರ್ನಾಟಕ, ಮಧ್ಯ ಕರ್ನಾಟಕ ಸೇರಿದಂತೆ ಇತರ ಭಾಗಗಳಲ್ಲಿ ದವಾಳಿಯನ್ನು ಸಂಭ್ರಮದಿಂದ ಆಚರಿಸುತ್ತಾರೆ.

ಕಾಳಿ ಅಮಾಸ್ ದಿನ ಬಂಜಾರರು ಸಾಮೂಹಿಕವಾಗಿ ಬೇಟೆಯಾಡುವುದು ವಾಡಿಕೆ. ಆದರೆ, ಈಗ ಬೇಟೆ ನಿಷಿದ್ಧವಿರುವುದರಿಂದ ಕುರಿ, ಮೇಕೆ ಕೊಯ್ದು ಅದನ್ನೇ ತಾಂಡಾದ ಪ್ರತಿ ಮನೆಗೂ ಸಮಪಾಲು ಹಾಕುತ್ತಾರೆ. ಕುರಿಯ ಪ್ರತಿ ಅಂಗದ ತುಂಡೂ ಪ್ರತಿ ಮನೆಗೂ ತಲುಪುವಂತೆ ಪಾಲು ಹಾಕುತ್ತಾರೆ. ಈ ಮೂಲಕ ಎಲ್ಲರೂ ಸಮಾನರು ಎನ್ನುವ ಸಮಾನತೆಯ ಗುಣವನ್ನು ಪ್ರತಿಪಾದಿಸುತ್ತಾರೆ. ಕುರಿಯ ಕರಳು ಇತ್ಯಾದಿ ಹಾಗೂ ರಕ್ತದಿಂದ ಮಾಡಿದ ಸಳೋಯಿ ಎನ್ನುವ ವಿಶಿಷ್ಟ ಮಾಂಸದಡುಗೆ ಮತ್ತು ಕಾನಾಬಾಜ್ (ಸುಟ್ಟ ಕುರಿಯ ತಲೆಯ ಕಿವಿಯ ಸಮೇತ ತೆಗೆದ ಚರ್ಮ) ಖಾದ್ಯವನ್ನು ಪರಸ್ಪರ ಹಂಚಿಕೊಂಡು ತಿನ್ನುತ್ತಾರೆ.

ದುಡಿಮೆಗೆಂದು ದೂರದ ಊರುಗಳಿಗೆ ವಲಸೆ ಹೋಗಿರುವವರು ತಪ್ಪದೇ ದವಾಳಿಯಂದು ತಾಂಡಾಕ್ಕೆ ಬರುತ್ತಾರೆ. ಸಾಂಪ್ರದಾಯಿಕ ಆಚರಣೆಗಳಲ್ಲಿ ಭಾಗಿಯಾಗಿ, ಹಿರಿಯರನ್ನು ನೆನೆದು, ಒಟ್ಟಾಗಿ ಊಟ ಮಾಡಿ ಕಷ್ಟ-ಸುಖ ಹಂಚಿಕೊಳ್ಳುತ್ತಾರೆ.

ಲಂಬಾಣಿಗರ ದವಾಳಿಯ ಕೇಂದ್ರ ಬಿಂದು ತಾಂಡಾದ ಯುವತಿಯರ 'ಮೇರಾ' (ಶುಭ ಕೋರುವುದು) ಆಚರಣೆ. ಮದುವೆಯಾಗದ ಯುವತಿಯರಷ್ಟೇ ಇದನ್ನು ಆಚರಿಸುತ್ತಾರೆ. 'ಮೇರಾ'ಕ್ಕಾಗಿ ಹಬ್ಬಕ್ಕೂ ತಿಂಗಳ ಮುನ್ನವೇ ತಾಂಡಾದ ಸೇವಾಲಾಲ್ ಮಟ್ಟು (ದೇಗುಲ) ಎದುರು ಯುವತಿಯರ ಹಾಡು, ಕುಣಿತದ ತಯಾರಿ ನಡೆದಿರುತ್ತದೆ. ಇದಕ್ಕೆ ತಾಂಡಾದ ಹಿರಿಯ ಮಹಿಳೆಯರ ಮಾರ್ಗದರ್ಶನವಿರುತ್ತದೆ. ಮುಖ್ಯವಾಗಿ ಇಂಥ ಹಾಡು, ನೃತ್ಯಗಳ ಸಂದರ್ಭಗಳಲ್ಲಿ ಯುವತಿಯರಲ್ಲಿ ತಮ್ಮ ಮನದನ್ನೆಯನ್ನು ಯುವಕರು ಆರಿಸಿಕೊಳ್ಳುವುದು ವಿಶೇಷ. ಇಂಥ ಯುವತಿ ಇಷ್ಟವಾಗಿದ್ದಾಳೆ ಎಂದು ಯುವಕ ಮನೆಯ ಹಿರಿಯರಿಗೆ ಹೇಳಿದರೆ, ಪರಸ್ಪರರ ಮನೆಗಳಲ್ಲಿ ಮಾತುಕತೆ ನಡೆಯುತ್ತದೆ. ಹೀಗೆ ವಿವಾಹಕ್ಕೆ 'ಮೇರಾ' ಮುನ್ನುಡಿ ಆಗುತ್ತದೆ.

ಕುಟುಂಬದ ಹಿರಿಯರನ್ನು ಸ್ಮರಿಸುವ ಆಚರಣೆಗೆ 'ಧಬುಕಾರ್' ಅನ್ನಲಾಗುತ್ತದೆ. ಹಿರಿಯರಿಂದ ಪ್ರಾರಂಭವಾಗಿ ಇತ್ತೀಚೆಗೆ ಮೃತರಾದವರವರೆಗೆ ಎಲ್ಲರನ್ನೂ, ಕೆಲವೆಡೆ ತಮ್ಮ ಸಾಕುಪ್ರಾಣಿಗಳ ಹೆಸರುಗಳನ್ನೂ ಸ್ಮರಿಸುತ್ತಾ ಸಿಹಿ ಅಡುಗೆ ಎಡೆ ಹಾಕುತ್ತಾರೆ. ಮನೆಯ ಒಲೆಯನ್ನು ಸ್ವಚ್ಛಗೊಳಿಸಿ, ರಂಗೋಲಿ ಹಾಕಿ ಅಲಂಕರಿಸುತ್ತಾರೆ. ಅಕ್ಕಿ ಹಿಟ್ಟು ಬೆಲ್ಲ ಹಾಕಿದ ನೀರನ್ನು ಕಲಸಿ, ಬೇಯಿಸಿದ ಮುದ್ದೆ ಹಿಟ್ಟಿನಂಥ ಹದವಾದ ಸಿಹಿ ಖಾದ್ಯದ ಜತೆಗೆ ತುಪ್ಪ ಸೇರಿಸಿ ಈ ಒಲೆಯ ಕೆಂಡದಲ್ಲಿಯೇ ಹಿರಿಯರಿಗಾಗಿ ಎಡೆ ಹಾಕುತ್ತಾರೆ.

ಕಾಳಿ ಅಮಾಸ್‌ನ ಮರುದಿನ ಬೆಳಿಗ್ಗೆ ಯುವತಿಯರು ತಮ್ಮ ಸಾಂಪ್ರದಾಯಿಕ ಲಂಬಾಣಿ ಉಡುಪು ತೊಟ್ಟು ಬುಟ್ಟಿ ಹಿಡಿದುಕೊಂಡು ಕಾಡು ಇಲ್ಲವೇ ಸುತ್ತಮುತ್ತಲಿನ ಬೆಟ್ಟಗುಡ್ಡಗಳಲ್ಲಿ ಸಿಗುವ ಕೆಲವು ಹೂಗಳನ್ನು ತರಲು ಹೋಗುತ್ತಾರೆ. ಬರುವಾಗ ರಾಗಿ, ಜೋಳದ ತೆನೆ ಅಥವಾ ಬೆಳೆದ ಬೆಳೆಗಳನ್ನು ತರುವರು. ದಾರಿಯುದ್ದಕ್ಕೂ ಹಾಡು-ಕುಣಿತದ ಸಾಥ್ ಇರುತ್ತದೆ. ಕಾಡಿನಲ್ಲಿರುವ ವಿಶೇಷ ಹೂಗಳನ್ನು ಸಂಗ್ರಹಿಸುತ್ತಾರೆ. ಅದರಲ್ಲೂ ಹಳದಿ ಬಣ್ಣದ ಹೊನ್ನಂಬರಿ (ಆವರಿಕೆ) ಹೂಗಳನ್ನೂ ತರುತ್ತಾರೆ. 'ಮೇರಾ'ದಲ್ಲಿ ಸಂಗ್ರಹವಾಗಿದ್ದ ಹಣದಲ್ಲಿ ಖರೀದಿಸಿದ ತಿಂಡಿ-ತಿನಿಸನ್ನು ಕಾಡಿನಲ್ಲಿಯೇ ಒಂದೆಡೆ ಕುಳಿತು ಯುವತಿಯರು ಹಂಚಿಕೊಂಡು ತಿಂದು ತಾಂಡಾಕ್ಕೆ ಮರಳುವರು. ಬಳಿಕ ತಾಂಡಾದ ಪ್ರತಿ ಮನೆಗೆ ಭೇಟಿ ನೀಡಿ ಅಲ್ಲಿ ಐದೈದು ಗೊದಣೋ (ಸಗಣಿಯ ಉಂಡೆ) ಮಾಡುತ್ತಾರೆ. ಇವುಗಳನ್ನು ಹೂಗಳಿಂದ ಅಲಂಕರಿಸಿ ಒಳಿತಾಗಲಿ ಎಂದು ಕೋರಿ ಐದು ಕಡೆ ಅಂದರೆ ದನದ ಕೊಟ್ಟಿಗೆ, ಅಡುಗೆ ಮನೆ, ದೇವರ ಹತ್ತಿರ, ಮುಖ್ಯ ಬಾಗಿಲು, ಮನೆ ಮಾಳಿಗೆ ಮೇಲೆ ಇಡುತ್ತಾರೆ.



**- ಸುರೇಶ ಎಸ್.ಲಮಾಣಿ.**
ಲೇಖಕರು, ಹವ್ಯಾಸಿ ಛಾಯಾಗ್ರಾಹಕರು.

## ಪ್ರಚಾರ ಸಮಿತಿಗೆ ಮೈಲಾರಪ್ಪ ಉಪಾಧ್ಯಕ್ಷ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಾಂಗ್ರೆಸ್ ಪಕ್ಷದ ಕಾರ್ಯ ಚಟುವಟಿಕೆಗಳನ್ನು ಸದೃಢಗೊಳಿಸಲು ರಾಜ್ಯದ ಉಪಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ ಅವರ ಮಾರ್ಗದರ್ಶನದಂತೆ ರೋಣ ಮತಕ್ಷೇತ್ರದ ಪ್ರಚಾರ ಸಮಿತಿಯ ಉಪಾಧ್ಯಕ್ಷರಾಗಿ ಜೈಭೀಮ್ ಸಂಘಟನೆಯ ರಾಜ್ಯ ಉಪಾಧ್ಯಕ್ಷ, ಕಾಂಗ್ರೆಸ್ ಮುಖಂಡ ಮೈಲಾರಪ್ಪ ಚಳ್ಳಮರದ ಉಪಾಧ್ಯಕ್ಷರಾಗಿ ಆಯ್ಕೆಗೊಂಡಿದ್ದಾರೆ. ಆಯ್ಕೆ ಸಮಿತಿ ಸಭೆಯ ಅಧ್ಯಕ್ಷತೆಯನ್ನು ಧುರೀಣ ಮಿಥುನ್ ಜಿ.ಪಾಟೀಲ ವಹಿಸಿದ್ದರು. ಈ ಸಂದರ್ಭದಲ್ಲಿ ಜಿಲ್ಲಾ ಪ್ರಚಾರ ಸಮಿತಿ ಉಸ್ತುವಾರಿ ಅನ್ನಪೂರ್ಣಾ ಪೂಜಾರ, ಗದಗ ಜಿಲ್ಲಾಧ್ಯಕ್ಷ ಅಶೋಕ ಮಂದಾಲಿ, ವೀರಣ್ಣ ಶೆಟ್ಟರ, ಗಜೇಂದ್ರಗಡ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಶರಣಪ್ಪ ಬೆಟಗೇರಿ ಮತ್ತಿತರರು ಉಪಸ್ಥಿತರಿದ್ದರೆಂದು ಪ್ರಕಟಣೆ ತಿಳಿಸಿದೆ.

## ಉದ್ಯೋಗ ಪಡೆಯಲು ವಿಶೇಷ ಕೌಶಲ್ಯ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ನರೇಗಲ್




ವಿದ್ಯಾರ್ಥಿಗಳ ಕೌಶಲ್ಯಕ್ಕೆ ತಕ್ಕಂತೆ ವಿವಿಧ ಕ್ಷೇತ್ರಗಳಲ್ಲಿ ವಿಪುಲ ಅವಕಾಶಗಳು ಸೃಷ್ಟಿಯಾಗುತ್ತಿವೆ. ಅದಕ್ಕಾಗಿ ತಂತ್ರಜ್ಞಾನದಲ್ಲಿ ಹಾಗೂ ಮಾತನಾಡುವ ವಿಧಾನದಲ್ಲಿ ಅಭಿವೃದ್ಧಿ ಹೊಂದಲು ಅಗತ್ಯವಾದ ಕೌಶಲ ಹೊಂದುವುದು ಅನಿವಾರ್ಯವಾಗಿದೆ ಎಂದು ಬೆಂಗಳೂರಿನ ಗಣಿತ್ ಸ್ಕೂಲ್ ಸಂಸ್ಥೆಯ ಸ್ಥಾಪಕ ಫಹೀಮ್ ಮಕಾಂದಾರ್ ಹೇಳಿದರು.

ನರೇಗಲ್ ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದ ಐಕ್ಯೂಎಸಿ ವಿಭಾಗದ ವತಿಯಿಂದ ಬಿಸಿಎ ಹಾಗೂ ಬಿಎಸ್‌ಸಿ ವಿದ್ಯಾರ್ಥಿಗಳಿಗಾಗಿ ಗುರುವಾರ ಆಯೋಜನೆ ಮಾಡಲಾಗಿದ್ದ 'ಕೌಶಲಾಭಿವೃದ್ಧಿ ಹಾಗೂ ವೃತ್ತಿ ಮಾರ್ಗದರ್ಶನದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೃತಕ ಬುದ್ಧಿಮತ್ತೆ (ಎ.ಐ) ತಂತ್ರಜ್ಞಾನವು ಕ್ರಾಂತಿಕಾರಿ ಬದಲಾವಣೆಗಳನ್ನು ದಿನವೂ ತರುತ್ತಿದೆ. ಇದರ ನಡುವೆಯೂ ಜೀವನದಲ್ಲಿ ಕಲಿಕೆ ಹಾಗೂ ಭವಿಷ್ಯದ ಭಾಗವಾಗಿ ಸವಾಲುಗಳನ್ನು ಸ್ವೀಕರಿಸಲು ಗಟ್ಟಿಯಾಗಿರಬೇಕು. ಕೋಡಿಂಗ್ ಜೊತೆಗೆ ಎಐ, ಎಐಎಂಎಲ್, ರೋಬೋಟಿಕ್ಸ್ ನಾನಾ ಬಗೆಯ ಕೌಶಲಗಳ ಅಗತ್ಯವಿದೆ. ಕಾಲಕ್ಕೆ ತಕ್ಕಂತೆ ವಿದ್ಯಾರ್ಥಿಗಳು ಹೊಸ ಕೌಶಲ ಕಲಿತಿದ್ದರೆ ಮಾತ್ರ ವೃತ್ತಿಯಲ್ಲಿ ನೆರವು ದೊರೆಯುತ್ತದೆ ಎಂದರು.

ಪ್ರಾಂಶುಪಾಲ ಎಸ್.ಎಲ್. ಗುಳೇದಗುಡ್ಡ ಮಾತನಾಡಿ, ನಾವು ಕಲಿಯುವಾಗ ಸೌಲಭ್ಯಗಳ ಕೊರತೆ ಬಹಳವಿತ್ತು. ಆದರೆ ಈಗ ಅನೇಕ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ನಿಮ್ಮ ಮನೆ ಬಾಗಿಲಿಗೆ ಬರುತ್ತಿವೆ. ಎಐ ತಂತ್ರಜ್ಞಾನದ ಮೂಲಕ ಕಡಿಮೆ ಅವಧಿಯಲ್ಲಿ ಅನೇಕ ಮಾಹಿತಿ ಸಿಗುತ್ತಿದೆ. ವಿಶೇಷ ತರಬೇತಿಯ ಉಪನ್ಯಾಸಕರ ಸಹಾಯದಿಂದ ದೊರೆಯುವ ಜ್ಞಾನದ ಸದುಪಯೋಗ ಪಡೆದುಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಿ ಎಂದರು.


ಈ ಸಂದರ್ಭದಲ್ಲಿ ಐಕ್ಯೂಎಸಿ ಸಂಚಾಲಕಿ ಜಯಶ್ರೀ ಮುತಗಾರ, ಬಿಸಿಎ ಮುಖ್ಯಸ್ಥೆ ಶಶಿಕಲಾ ವಿ.ಎಸ್ ಇದ್ದರು.

### ಭಾರತ ಪ್ರಥಮ ಸ್ವಾತಂತ್ರ್ಯ ಹೋರಾಟದ ಧೀರ ನಾಯಕಿ-ಕಿತ್ತೂರು ರಾಣಿ ಚೆನ್ನಮ್ಮ

# ಸ್ವಾತಂತ್ರ್ಯ ಸಂಗ್ರಾಮದ ಬೆಳ್ಳಿ ಚುಕ್ಕಿ

'ಮಹಿಳೆ ದುರ್ಬಲಳಲ್ಲ, ಅವಳಲ್ಲಿ ದೇಶವನ್ನು ಕಾಪಾಡುವ ಶಕ್ತಿಯಿದೆ.' ಈ ಮಾತು ಕಿತ್ತೂರಿನ ಧೀರ ನಾಯಕಿ ರಾಣಿ ಚೆನ್ನಮ್ಮರ ಬದುಕಿನ ಸಾರ. ಭಾರತದ ಸ್ವಾತಂತ್ರ್ಯ ಇತಿಹಾಸದ ಮೊದಲ ಪುಟದಲ್ಲೇ ಅಕ್ಷರಶಃ ಅಮರಳಾದ ಹೆಸರಿದು. ಬ್ರಿಟಿಷರ ಕ್ರೂರ ಆಳ್ವಿಕೆಗೆ ಮೊದಲ ಬಾರಿಗೆ ಸವಾಲು ಹಾಕಿದ ಧೈರ್ಯವಂತೆ ರಾಣಿ ಚೆನ್ನಮ್ಮರು, ಮಹಿಳಾ ಶೌರ್ಯ, ತ್ಯಾಗ ಮತ್ತು ದೇಶಭಕ್ತಿಯ ಜೀವಂತ ಪ್ರತೀಕವಾಗಿ ಇಂದಿಗೂ ಜನಮನಗಳಲ್ಲಿ ಅಳಿಯದ ಸ್ಥಾನ ಪಡೆದಿದ್ದಾರೆ.

1778ರಲ್ಲಿ ಬೆಳಗಾವಿ ಜಿಲ್ಲೆಯ ಕಾಕತ ಗ್ರಾಮದಲ್ಲಿ ಜನಿಸಿದ ಚೆನ್ನಮ್ಮರು ಬಾಲ್ಯದಲ್ಲೇ ಸಾಹಸ ಪ್ರಿಯೆ. ಕುದುರೆ ಸವಾರಿ, ಕತ್ತಿಯಾಟ, ಬಿಲ್ಲುಬಾಣ ಇವು ಅವರ ದಿನನಿತ್ಯದ ಆಟಗಳು. ದೃಢ ಮನೋಬಲ ಮತ್ತು ನ್ಯಾಯಬುದ್ಧಿಯಿಂದ ಅವರು ತೊಡಗಿದ ಪ್ರತಿ ಕಾರ್ಯದಲ್ಲೂ ಶೌರ್ಯ ಪ್ರದರ್ಶಿಸಿದರು. ಆ ಸಮಯದಲ್ಲಿ ಮಹಿಳೆಯರು ಅಂಗಳದ ಒಳಗೆ ಸೀಮಿತವಾಗಿದ್ದಾಗ, ಚೆನ್ನಮ್ಮರು ಹೊರಾಂಗಣದಲ್ಲಿ ಧೈರ್ಯ ಪ್ರದರ್ಶನದ ಮಾದರಿಯಾದರು.



ಚೆನ್ನಮ್ಮರು ಕಿತ್ತೂರಿನ ರಾಜ ಮಲ್ಲಸರ್ಜರ ಪತ್ನಿಯಾಗಿದ್ದರು. ಪತಿಯ ನಿಧನದ ಬಳಿಕ ಅವರು ರಾಜ್ಯದ ಹೊಣೆ ಹೊತ್ತು ಆಡಳಿತದಲ್ಲಿ ದೃಢತೆಯಿಂದ ನಡೆದುಕೊಂಡರು. ಸಂತಾನವಿಲ್ಲದ ಕಾರಣ ಶಿವಲಿಂಗಪ್ಪನನ್ನು ದತ್ತು ಪಡೆದರು. ಆದರೆ ಬ್ರಿಟಿಷರು ತಮ್ಮ "Doctrine of Lapse" ಎಂಬ ಅಕ್ರಮ ನೀತಿಯಡಿ ದತ್ತಕದ ಮೂಲಕ ರಾಜ್ಯದ ಹಕ್ಕು ಸಿಗುವುದಿಲ್ಲ ಎಂದು ಘೋಷಿಸಿ, ಕಿತ್ತೂರನ್ನು ವಶಪಡಿಸಿಕೊಳ್ಳಲು ಮುಂದಾದರು.

ರಾಣಿಗೆ ಇದು ಕೇವಲ ಆಡಳಿತದ ವಿಷಯವಲ್ಲ, ಗೌರವ ಮತ್ತು ಸ್ವಾಭಿಮಾನದ ವಿಷಯವಾಯಿತು. ಅವರು ಬ್ರಿಟಿಷ ಅಧಿಕಾರಿಗೆ ಬರೆದ ಪತ್ರದಲ್ಲಿ ಹೇಳಿದರು: 'ನಮ್ಮ ರಾಜ್ಯದ ಹಕ್ಕು, ಗೌರವ ಹಾಗೂ ಸ್ವಾಭಿಮಾನವನ್ನು ಯಾರೂ ಕಿತ್ತುಕೊಳ್ಳಲು ಸಾಧ್ಯವಿಲ್ಲ.' ಎಂದು ಎಚ್ಚರಿಕೆ ಸಹ ನೀಡಿದರು.

ಬ್ರಿಟಿಷರ ವಿರುದ್ಧದ ಮೊದಲ ಮಹಿಳಾ ಕ್ರಾಂತಿಯಾಗಿ 1824ರ ಕಿತ್ತೂರು ಯುದ್ಧ ಇತಿಹಾಸದಲ್ಲಿ ಚಿರಸ್ಮರಣೀಯ. ರಾಣಿ ಚೆನ್ನಮ್ಮರ ನೇತೃತ್ವದಲ್ಲಿ ನಡೆದ ಈ ಹೋರಾಟದಲ್ಲಿ ಸ್ಥಳೀಯ ಯೋಧರು ಅಪಾರ ಶೌರ್ಯ ತೋರಿದರು. ಅವರ ಸೇನಾಪತಿಗಳಾದ ಅಮತೂರು ಬಲಪ್ಪ, ಸಂಗೊಳ್ಳಿ ರಾಯಣ್ಣ, ಗುರು ಬಸಪ್ಪ ನಾಯ್ಕ, ಸಿದ್ದಪ್ಪ ನಾಯ್ಕ ಮುಂತಾದವರು ರಾಣಿಯ ಮಾತಿಗೆ ಜೀವಕೊಡಲು ಸಿದ್ಧರಾದರು.

ಯುದ್ಧದ ವೇಳೆ ಬ್ರಿಟಿಷ ಕಮಾಂಡರ್ ಥಾಕ್ಸನ್ ಹಾಗೂ ಅನೇಕರು ಕೊಲ್ಲಲ್ಪಟ್ಟರು. ಇದು ಭಾರತೀಯ ಸ್ವಾತಂತ್ರ್ಯ ಚಳುವಳಿಯ ಮೊದಲ ವಿಜಯದ ಬೆಳಕು ಎಂದೇ ಕರೆಯಲ್ಪಟ್ಟಿದೆ. ಈ ಸೋಲಿನಿಂದ ಕೋಪಗೊಂಡ ಬ್ರಿಟಿಷರು ಮೋಸ ಮಾಡಿ ಶಾಂತಿ ಒಪ್ಪಂದದ ನೆಪದಲ್ಲಿ ಕೋಟೆಗೆ ನುಗ್ಗಿದರು. ರಾಣಿ ಚೆನ್ನಮ್ಮ ಹಾಗೂ ಸಂಗೊಳ್ಳಿ ರಾಯಣ್ಣರನ್ನು ಬಂಧಿಸಿದರು. ರಾಣಿಯನ್ನು ಬೈಲಹೊಂಗಲ ಕಾರಾಗೃಹಕ್ಕೆ ಕಳುಹಿಸಿ ಕಠಿಣ ನಿಗಾವಳಿಯಲ್ಲಿ ಇರಿಸಿದರು.

ಬಂಧನದಲ್ಲಿದ್ದರೂ ಅವರ ಮನಸ್ಸಿನಲ್ಲಿ ದೇಶದ ಸ್ವಾತಂತ್ರ್ಯದ ಕನಸು ಆರಲಿಲ್ಲ. ಅವರು ತಮ್ಮ ಹೋರಾಟಗಾರರಿಗೆ ಪ್ರೇರಣಾ ಪತ್ರಗಳನ್ನು ಕಳುಹಿಸುತ್ತಿದ್ದರು. ಕೊನೆಗೆ 1829ರಲ್ಲಿ ಕಾರಾಗೃಹದಲ್ಲಿಯೇ ಪ್ರಾಣ ತ್ಯಾಗ ಮಾಡಿದರೂ, ಅವರ ಆತ್ಮದ ದೀಪ ಭಾರತಕ್ಕೆ ಶಾಶ್ವತವಾಗಿ ಬೆಳಗಿತು. ರಾಣಿ ಚೆನ್ನಮ್ಮರು ಹಾಕಿದ ಹೋರಾಟದ ಕಿಡಿ ಮಣ್ಣಿನಲ್ಲಿ ಆರಲಿಲ್ಲ. ಸಂಗೊಳ್ಳಿ ರಾಯಣ್ಣರು ಅವರಿಂದ ಪ್ರೇರಿತವಾಗಿ ಗೆರಿಲ್ಲಾ ಯುದ್ಧ ತಂತ್ರದಿಂದ ಬ್ರಿಟಿಷರಿಗೆ ಭಾರೀ ತೊಂದರೆ ನೀಡಿದರು. ಕರ್ನಾಟಕದಿಂದ ಝೂನ್ಸಿವರೆಗೆ, ಹಲವೆಡೆಗಳಲ್ಲಿ ಕ್ರಾಂತಿಚೇತನ ಹುಟ್ಟಿತು. ಅವರ ಹೋರಾಟವೇ 1857ರ ಪ್ರಥಮ ಸ್ವಾತಂತ್ರ್ಯ ಹೋರಾಟಕ್ಕೆ ಪ್ರೇರಣೆಯಾದ ಬೀಜವಾಯಿತು.

ಪ್ರತಿ ವರ್ಷ ಅಕ್ಟೋಬರ್ ತಿಂಗಳ ಮೂರನೇ ವಾರದಲ್ಲಿ ನಡೆಯುವ ಕಿತ್ತೂರು ಉತ್ಸವ ರಾಣಿ ಚೆನ್ನಮ್ಮರ ಶೌರ್ಯವನ್ನು ಸ್ಮರಿಸುವ ಸಾಂಸ್ಕೃತಿಕ ಹಬ್ಬವಾಗಿದೆ. ರಾಜ್ಯಾದ್ಯಂತ ಶಾಲೆ, ಮಹಾವಿದ್ಯಾಲಯಗಳಲ್ಲಿ ಅಕ್ಟೋಬರ್ 23ರ ದಿನವನ್ನು ರಾಣಿ ಚೆನ್ನಮ್ಮರ ಜನ್ಮ ದಿನಾಚರಣೆ ಮೂಲಕ ಸ್ಮರಿಸಲ್ಪಡುತ್ತದೆ. ಶೌರ್ಯ ಮೆರವಣಿಗೆ, ನಾಟಕ, ನೃತ್ಯ ಪ್ರದರ್ಶನಗಳು, ಕಿತ್ತೂರಿನ ಇತಿಹಾಸದ ಚಿತ್ರ-ಶಿಲ್ಪ ಪ್ರದರ್ಶನಗಳು, ವಿದ್ಯಾರ್ಥಿಗಳ ಪ್ರಬಂಧ, ಭಾಷಣ ಸ್ಪರ್ಧೆಗಳನ್ನು ಏರ್ಪಡಿಸಿ ಮಕ್ಕಳಿಗೆ ರಾಣಿ ಚೆನ್ನಮ್ಮರ ಕುರಿತಾಗಿ ತಿಳಿಸಿಕೊಡಲಾಗುತ್ತದೆ.

ಕಿತ್ತೂರು ರಾಣಿ ಚೆನ್ನಮ್ಮರು ಕೇವಲ ಇತಿಹಾಸದ ಒಂದು ಅಧ್ಯಾಯವಲ್ಲ. ಅವರು ಮಹಿಳಾ ಸಬಲೀಕರಣದ ಶಾಶ್ವತ ಮಾದರಿ, ದೇಶಭಕ್ತಿಯ ಜೀವಂತ ದೀಪ. ಅವರ ಹೆಸರಿನಲ್ಲಿ ದೇಶದಾದ್ಯಂತ ರಸ್ತೆ, ವಿಶ್ವವಿದ್ಯಾಲಯಗಳು, ಸ್ಮಾರಕಗಳು ಸ್ಥಾಪಿಸಲ್ಪಟ್ಟಿವೆ. ಅವರ ಜೀವನ ಕಥೆ ಪ್ರತಿ ಭಾರತೀಯ ಮಹಿಳೆಗೆ ಆತ್ಮವಿಶ್ವಾಸ, ಶಕ್ತಿ ಮತ್ತು ಪ್ರೇರಣೆಯನ್ನು ಬಿತ್ತುತ್ತದೆ.

ರಾಣಿ ಚೆನ್ನಮ್ಮರು ಶೌರ್ಯ, ತ್ಯಾಗ ಮತ್ತು ಮಹಿಳಾ ಶಕ್ತಿಯ ಅನನ್ಯ ಪ್ರೇರಣೆ. ಅವರ ಹೆಸರಿನಂತೆ ಕಿತ್ತೂರಿನ ಮಣ್ಣು ಎಂದಿಗೂ ಧೈರ್ಯ, ಸ್ವಾತಂತ್ರ್ಯ ಮತ್ತು ಗೌರವದ ಸಂಕೇತವಾಗಿ ಬೆಳಗುತ್ತದೆ.

**- ವಸಂತ ಬಿ.ಮಡ್ಲೂರ.**
ಸಹಾಯಕ ನಿರ್ದೇಶಕರು,
ವಾ.ಸಾ.ಸಂ ಇಲಾಖೆ, ಗದಗ.

## ಬಾಲಕನ ಪತ್ತೆಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ



ಬೆಟಗೇರಿಯ ಶಿವನಾಗ ನಗರದ 14 ವರ್ಷ 10 ತಿಂಗಳು ವಯಸ್ಸಿನ ಅರ್ಜುನ ಹನುಮಂತ ವಡ್ಡರ ಎಂಬಾತ ಹುಟ್ಟಿನಿಂದಲೇ ಮೂಕನಿದ್ದು, ಮಾನಸಿಕ ಅಸ್ವಸ್ಥನಿರುತ್ತಾನೆ. ಈತ ಅ. 5ರಂದು ಮಧ್ಯಾಹ್ನ 12 ಗಂಟೆಯ ಸುಮಾರಿಗೆ ಬೆಟಗೇರಿ ಶಿವನಾಗ ನಗರದಲ್ಲಿರುವ ತಮ್ಮ ಮನೆಯ ಮುಂದೆ ಆಟ ಆಡುತ್ತಿದ್ದಾಗ ಅಪರಿಚಿತರು ಅಪಹರಿಸಿದ್ದಾರೆ ಎಂದು ಫಿರ್ಯಾದಿದಾರರಾದ ರೇಣವ್ವ ಗೋವಿಂದಪ್ಪ ವಡ್ಡರ ದೂರು ನೀಡಿದ್ದಾರೆ.

ನಾಪತ್ತೆಯಾದ ಬಾಲಕನಿಗಾಗಿ ಹುಡಕಾಡಿ ಅವನು ಸೀಗದೇ ಇರುವದರಿಂದ ಠಾಣೆಗೆ ಬಂದು ಫಿರ್ಯಾದಿ ನೀಡಿದ್ದು, ಬೆಟಗೇರಿ ಪೊಲೀಸ್ ಠಾಣಾ ಗುನ್ನಾ ನಂಬರ್: 120/2025 ಕಲಂ: 137(2) ಬಿ.ಎನ್.ಎಸ್-2023ನೇದ್ದರ ಅಡಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

**ಚಹರೆ:** ಎತ್ತರ-4 ಅಡಿ 6 ಇಂಚು, ಸಾಧಾರಣ ಮೈಕಟ್ಟು, ಕೋಲು ಮುಖ, ಸಾದುಗಪ್ಪು ಮೈಬಣ್ಣ, ನೇರ ಮೂಗು, ಕಪ್ಪು ಕಣ್ಣು, ತಲೆಯಲ್ಲಿ ಕಪ್ಪು ಕೂದಲು ಇರುತ್ತದೆ. ಮನೆಯಿಂದ ಹೋಗುವಾಗ ಬೂದು ಬಣ್ಣದ ಅರ್ಧ ತೋಳಿನ ಟಿ-ಶರ್ಟ್ ಮತ್ತು ಕಂದು ಬಣ್ಣದ ಚಡ್ಡಿಯನ್ನು ಧರಿಸಿರುತ್ತಾನೆ.

ಸದರಿ ಚಹರೆಯುಳ್ಳ ಬಾಲಕ ಕಂಡುಬಂದಲ್ಲಿ ಬೆಟಗೇರಿ ಪೊಲೀಸ್ ಠಾಣೆ-08372-246333. ಪಿ.ಎಸ್.ಐ. ಬೆಟಗೇರಿ ಪೊಲೀಸ್ ಠಾಣೆ-9480804449 betagerigdg@ksp.gov.in, ಗದಗ ಕಂಟ್ರೋಲ್ ರೂಮ್-08372-238300/9480804400 ಇಲ್ಲಿ ಮಾಹಿತಿ ನೀಡುವಂತೆ ಪೊಲೀಸ್ ಪ್ರಕಟಣೆ ತಿಳಿಸಿದೆ.

# ವಿಜೃಂಭಣೆಯ ಗಂಧ-ಉರುಸ್ ಆಚರಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದಲ್ಲಿ ಶನಿವಾರ ಹಜರತ್ ಮೆಹಬೂಬ್ ಸುಭಾನಿ ದರ್ಗಾದ ಗಂಧ ಮತ್ತು ಉರುಸು ಕಾರ್ಯಕ್ರಮವು ವಿಜೃಂಭಣೆಯಿಂದ ಜರುಗಿತು.

ಕಾರ್ಯಕ್ರಮದ ಅಂಗವಾಗಿ ಕರ್ನಾಟಕ ಏಕೀಕರಣದ ರೂವಾರಿ ದಿ. ಅಂದಾನಪ್ಪ ದೊಡ್ಡಮೇಟಿಯವರ ಮನೆಯಿಂದ ಗಂಧವನ್ನು ಡೊಳ್ಳು ವಾದ್ಯ ವೈಭವದೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಬಂಡಿವಡ್ಡರ ಓಣಿಯಲ್ಲಿರುವ ದರ್ಗಾಕ್ಕೆ ತರಲಾಯಿತು.

ದರ್ಗಾದಲ್ಲಿರುವ ಸಮಾಧಿಗೆ ವಿದ್ಯುತ್ ದೀಪಗಳ ಅಲಂಕಾರ ಹಾಗೂ ವಿವಿಧ ಬಗೆಯ ಹೂಗಳಿಂದ ಅಲಂಕಾರ ಮಾಡಲಾಗಿತ್ತು. ನಂತರ ನೆರೆದಿದ್ದ ಭಕ್ತರಿಗೆ ಅನ್ನ ಪ್ರಸಾದ ವಿತರಣೆ ನೆರವೇರಿತು.

ಈ ವೇಳೆ ತಾ.ಪಂ ಮಾಜಿ ಸದಸ್ಯ ಸಂದೇಶ್ ದೊಡ್ಡಮೇಟಿ, ಗ್ರಾ.ಪಂ ಮಾಜಿ ಸದಸ್ಯ ಹರ್ಷವರ್ಧನ್ ದೊಡ್ಡಮೇಟಿ, ಜಮಾತ್ ಕಮಿಟಿಯ ಅಧ್ಯಕ್ಷ ಹುಚ್ಚುಸಾಬ ಬಸಾಪೂರ, ಯಮನೂರಸಾಬ ನದಾಫ್, ಕಾಶೀಮಲ್ಲಿ ಗಡಾದ, ಬಾಬುಸಾಬ ರಾಜೂರ, ಹಸನ್‌ಸಾಬ ಗಡಾದ, ರೈಮನಸಾಬ ಬಾಲೇಸಾಬನವರ, ಮಾಬು ನದಾಫ್, ಬಂಧು ಗಡಾದ, ದಾದಾಸಾಹೇಬ್ ನಮಾಜಿ, ಕುತ್ಬುದೀನ್ ಗಡಾದ, ಎಂ.ಎಚ್. ನದಾಫ್, ಹುಸೇನಸಾಬ ಓಲೇಕಾರ ಸೇರಿದಂತೆ ಇನ್ನಿತರರು ಇದ್ದರು.

## 20 ತೊಲೆ ಬಂಗಾರ ಹಾಕಿದ ಎಂದು ಹೇಳಿರುವುದು ಚಾರಿತ್ರ್ಯಹನನದ ಕಾರ್ಯ: ತೋಂಟದ ಶ್ರೀಗಳು

# ಕನೇರಿ ಶ್ರೀಗಳ ಆರೋಪ ಶುದ್ಧ ಸುಳ್ಳು

■ವಿಜಯಸಾಕ್ಷಿ ಸುದ್ದಿ, ಗದಗ

ಸಂದರ್ಶನವೊಂದರಲ್ಲಿ ಮಹಾರಾಷ್ಟ್ರ ಕನೇರಿಮಠದ ಶ್ರೀಗಳು ನಮ್ಮ ಪೂರ್ವಾಶ್ರಮದ ಸಂಬಂಧಿಗಳಿಗೆ ನಾವು 20 ತೊಲೆ ಬಂಗಾರ ಕೊಟ್ಟಿರುವುದಾಗಿ ಹೇಳಿಕೆ ನೀಡಿದ್ದಾರೆ ಎಂದು ತಿಳಿದು ಬಂತು. ಅವರ ಈ ಆರೋಪ ನಿರಾಧಾರ ಮತ್ತು ಶುದ್ಧ ಸುಳ್ಳು. ಈ ರೀತಿಯ ಆರೋಪ ಮಾಡುವ ಮೂಲಕ ಬಸವ ಸಂಸ್ಕೃತಿ ಅಭಿಯಾನದ ಮುಂಚೂಣಿಯಲ್ಲಿರುವ ನಮ್ಮನ್ನು ಹೆದರಿಸಿ ಹಿಂದೆ ಸರಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಡಂಬಳ-ಗದಗ ತೋಂಟದಾರ್ಯ ಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಶ್ರೀಗಳು, ಈ ಮೊದಲು ನಾವು ನಮ್ಮ ಪೂರ್ವಾಶ್ರಮ ಸಂಬಂಧಿಗಳ ಯಾವುದೇ ಮದುವೆಗೆ ಹೋದ ಉದಾಹರಣೆ ಇಲ್ಲ. ಮದುವೆಯಾಗುವ ಹುಡುಗ ನಮ್ಮ ಪ್ರಸಾದನಿಲಯದ ವಿದ್ಯಾರ್ಥಿಯಾಗಿದ್ದವ. ಅವನ ದಯನೀಯ ಪ್ರಾರ್ಥನೆಗೆ ಹೋಗಲೇಬೇಕಾದ ಅನಿವಾರ್ಯತೆ. ಆದಾಗ್ಯೂ ಮದುವೆಯ ದಿನ ಹೋಗದೇ ಹಿಂದಿನ ದಿನ ನಾವು ಎಲ್ಲ ಮದುವೆಗಳಿಗೆ ಹೋದಂತೆ ಹೋಗಿ ಅವನಿಗೊಂದು ಶಾಲು ಹೊದಿಸಿ ಆಶೀರ್ವದಿಸಿ ಬರಲಾಗಿದೆ. ನಾವು ಈ ಮದುವೆಯಲ್ಲಿ ಯಾವುದೇ ಬಂಗಾರ ಕೊಟ್ಟಿಲ್ಲ. 20 ತೊಲೆ ಬಂಗಾರ ಹಾಕಿದರು ಎಂದು ಹೇಳಿರುವುದು ನಮ್ಮ



ಚಾರಿತ್ರ್ಯಹನನದ ಕಾರ್ಯವಾಗಿದೆ.

ಲಿಂಗಾಯತ ಸ್ವತಂತ್ರ ಧರ್ಮವಾದರೆ ಲಿಂಗಾಯತರು ಧಾರ್ಮಿಕ ಅಲ್ಪಸಂಖ್ಯಾತರಾಗುವ ಮೂಲಕ ಸಂವಿಧಾನದತ್ತವಾದ ಅನೇಕ ಸೌಲಭ್ಯಗಳನ್ನು ಪಡೆಯುತ್ತಾರೆ. ಇದು ಲಿಂಗಾಯತರ ಭವಿಷ್ಯದ ಹಿತದೃಷ್ಟಿಯಿಂದ ನಡೆದ ಹೋರಾಟ. ಇದರಿಂದ ದೇಶ ಹಾಳಾಗುತ್ತದೆ ಎಂದು ಹೇಳುವುದು ಸರಿಯಲ್ಲ. ಈ ಮೊದಲು ಭಾರತೀಯರೇ ಆಗಿರುವ ಬೌದ್ಧ ಧರ್ಮೀಯರಿಗೆ, ಸಿಖ್ಖ ಧರ್ಮದವರಿಗೆ ಮತ್ತು ಇತ್ತೀಚೆಗೆ ಜೈನಧರ್ಮದವರಿಗೆ ಸ್ವತಂತ್ರ ಧರ್ಮದ ಸ್ಥಾನ ನೀಡಲಾಗಿದೆ. ಇದರಿಂದ ದೇಶದ ಭದ್ರತೆ-ಗೆ ಯಾವ ಹಾನಿಯಾಗಿದೆ? ಅದೇ ಮಾದರಿಯಲ್ಲಿ ದೇಶಪ್ರೇಮಿಗಳಾಗಿರುವ ಲಿಂಗಾಯತರ ಸಾಂವಿಧಾನಿಕ ಹಕ್ಕುಗಳನ್ನು ಪಡೆಯುವುದು ಲಿಂಗಾಯತ ಹೋರಾಟದ ಉದ್ದೇಶವಾಗಿದೆ.

ಇನ್ನು ಮೇಲಾದರೂ ಧರ್ಮಕ್ಕೆ ಧರ್ಮಾಧಿಕಾರಿಗಳಿಗೆ ಸಂಬಂಧಿಸಿದ ವಿಷಯವನ್ನು ತಾತ್ತ್ವಿಕ ನೆಲೆಯಲ್ಲಿ ಖಂಡಿಸಲಿ, ಅದಕ್ಕೆ ಸ್ವಾಗತವಿದೆ. ಆದರೆ ಸುಳ್ಳು ಆರೋಪಗಳ ಮೂಲಕ ಚಾರಿತ್ರ್ಯಹನನ ಮಾಡುವ ಕೆಲಸ ಯಾರೂ ಮಾಡಬಾರದು. ಇದು ಮಠಾಧಿಪತಿಗಳಾದವರಿಗೆ ಶೋಭೆ ತರುವಂತಹದ್ದಲ್ಲ ಎಂದು ಶ್ರೀಗಳು ತಿಳಿಸಿದ್ದಾರೆ.

ಇದನ್ನು ತಾತ್ತ್ವಿಕ ನೆಲೆಯಲ್ಲಿ ಅವರು ಖಂಡಿಸುವುದನ್ನು ಬಿಟ್ಟು, ಹೋರಾಟದ ಮುಂಚೂಣಿಯಲ್ಲಿರುವ ನಮ್ಮನ್ನು ಮಾತ್ರ ಗುರಿ ಮಾಡಿಕೊಂಡು ಸುಳ್ಳು ಆರೋಪ ಹೊರಿಸುವುದು ಎಷ್ಟು ಸರಿ? ನಾವು ಅಂಥ ಕೆಲಸ ಮಾಡಿದ್ದರೆ ನಮ್ಮ ಭಕ್ತರು ಪ್ರಶ್ನಿಸುತ್ತಾರೆ. ನಿಮ್ಮ ಮಠದ ಹಾಗೆಯೇ ನಮ್ಮ ಮಠದ ಆಡಳಿತವೂ ಪಾರದರ್ಶಕವೇ ಆಗಿದೆ. ಮಠದ ಎಲ್ಲ ವ್ಯವಹಾರಗಳನ್ನು ವ್ಯವಸ್ಥಾಪಕರು, ವಿದ್ಯಾಸಂಸ್ಥೆಗಳ ವ್ಯವಹಾರಗಳನ್ನು ಆಡಳಿತಾಧಿಕಾರಿಗಳು ಮೊದಲಿನಿಂದಲೂ ಮಾಡಿಕೊಂಡು ಬಂದಿದ್ದಾರೆ. ನಾವು ನಮಗೆ ಬೇಕಾದವರನ್ನು ನೇಮಿಸಿಕೊಂಡು ಯಾವುದೇ ಭ್ರಷ್ಟ ವ್ಯವಹಾರ ಮಾಡಿಲ್ಲ ಎಂದು ಕನೇರಿ ಶ್ರೀಗಳಿಗೆ ಸ್ಪಷ್ಟಪಡಿಸಿದ್ದಾರೆ.

# ಕವಿತೆಯೆಂಬುದು ಅಭಿವ್ಯಕ್ತಿ ಮಾಧ್ಯಮ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕವಿತೆಗಳು ಮನದಾಳದ ಪ್ರೀತಿ, ಸ್ನೇಹ, ನೋವು, ಸಂತೋಷ, ಕೋಪ ಇತರೆಲ್ಲ ಭಾವನೆಗಳು ಹಾಗೂ ಅನುಭವ, ಆಲೋಚನೆಗಳ ಅಭಿವ್ಯಕ್ತಿ ಮಾಧ್ಯಮವಾಗಿವೆ ಎಂದು ಎಂದು ಜಿಮ್ಸ್‌ನ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಹೇಳಿದರು.

ಅವರು ಪಟ್ಟಣದ ಮಹಾಕವಿ ಪಂಪ ವೃತ್ತದ ಬಳಿಯ ಎಸ್.ಬಿ. ಮುಳ್ಳಳ್ಳಿ ಅವರ ನಿವಾಸದಲ್ಲಿ ಭಾನುವಾರ 'ನಮ್ಮ-ನಿಮ್ಮ ವೇದಿಕೆ'ಯ ಆಶ್ರಯದಲ್ಲಿ ನಡೆದ ಕವಿತೆ-ಮಾತು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಾಹಿತ್ಯದ ಮೂಲಕ ಮನಸ್ಸಿನ ಭಾವನೆಗಳು, ಕಲ್ಪನೆಗಳ ಅಭಿವ್ಯಕ್ತಿಸುವುದು ಕವಿತೆಯಾಗಿದೆ. ಭಾವನೆಗಳಿಗೆ ಶಬ್ದ-ಅರ್ಥಗಳ ಬಣ್ಣ ಹಚ್ಚಿ ಸುಂದರಗೊಳಿಸುವುದು ಕಾವ್ಯಕ್ಕೆ ಇರುವ ಶಕ್ತಿ. ಅಧ್ಯಯನವು ಕಾವ್ಯ ಕಟ್ಟಲು ಸಹಕಾರಿಯಾಗಿವೆ ಎಂದರಲ್ಲದೆ, ತಾವು ತಂದೆ, ಗುರುಗಳು, ಗೆಳೆಯರು, ಕೋವಿಡ್, ಜಾನಪದ, ಬಾಲ್ಯ ಹೀಗೆ ರಚಿಸಿದ ಹಲವು ಕವಿತೆಗಳನ್ನು ವಾಚನ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಮೆರುಗು ತುಂಬಿದರು.

ಶಿಗ್ಗಾಂವಿಯ ವಿರಕ್ತ ಮಠದ ಸಂಗನಬಸವ ಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿ, ಕವಿತೆಗಳು ವ್ಯಕ್ತಿತ್ವವನ್ನು ಅಭಿವ್ಯಕ್ತಿಗೊಳಿಸುವ ಕಲೆಯಾಗಿದೆ. ಭಾವನೆಗಳಿಗೆ ಶಬ್ದಗಳ ಬಲೆ ಹೆಣೆದು ಸುಂದರವಾಗಿ ಕಾಣುವಂತೆ ಮಾಡಿ ಗೇಯತೆಗೆ ತೊಡಗಿಸುವ ಕಾರ್ಯ ಅದ್ಭುತ ಎಂದು ಹೇಳಿದರು.

ಸಾಹಿತಿ ಡಾ. ಮಂಜುನಾಥ ಬಮ್ಮನಕಟ್ಟಿ ಮಾತನಾಡಿ, ಕವಿತೆಗಳು ಬದುಕು ಮತ್ತು ಸಮಾಜಕ್ಕೆ ಪೂರಕವಾಗಿರಬೇಕು ಈ ನಿಟ್ಟಿನಲ್ಲಿ ಕವಿಗಳ ಜವಾಬ್ದಾರಿ ಮುಖ್ಯವಾಗಿರುತ್ತದೆ ಎಂದರು.

ಸುಮಾ ಚೋಟಗಲ್, ಎಸ್.ಬಿ. ಮುಳ್ಳಳ್ಳಿ ಮಾತನಾಡಿದರು. ಈ ವೇಳೆ ಜಿ.ಪಂ ಮಾಜಿ ಸದಸ್ಯ ಎಸ್.ಪಿ. ಬಳಿಗಾರ, ಸಾಹಿತಿ ಸಿ.ಜಿ. ಹಿರೇಮಠ, ಪಿ.ಬಿ. ಖರಾಟೆ, ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ಫಕ್ಕಿರೇಶ ಮ್ಯಾಟಣ್ಣವರ, ಬಸವರಾಜ ದೊಡ್ಡಮನಿ, ಎಸ್. ಎಫ್. ಕೊಡ್ಲಿ, ರಾಜು ಪಾಟೀಲ್, ಸುವರ್ಣ ನಂದಿಕೋಲಮಠ ಮುಂತಾದವರಿದ್ದರು. ರವಿರಾಜ ಶಿಗ್ಲಿ ಪ್ರಾರ್ಥಿಸಿದರು. ಬಸವರಾಜ ಬಾಳೇಶ್ವರಮಠ ಕಾರ್ಯಕ್ರಮ ನಿರ್ವಹಿಸಿದರು.

## ಕಸಾಪ ವತಿಯಿಂದ ನಾರಾಯಣಭಟ್ ಶಿವಪೂರ ದತ್ತಿ ಉಪನ್ಯಾಸ

# ಜನಪದ ಸಾಹಿತ್ಯ ಜೀವನ ಮೌಲ್ಯಗಳ ಹೂರಣ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಸಂಸ್ಕೃತಿಯ ಬೇರುಗಳನ್ನು ಜನಪದ ಸಾಹಿತ್ಯದಲ್ಲಿ ಕಾಣುತ್ತೇವೆ. ದೈನದಿಂದ ಬದುಕು, ಹಬ್ಬ ಹರಿದಿನಗಳು, ಕೃಷಿ ಚಟುವಟಿಕೆಗಳು, ಭಕ್ತಿ ಭಾವ, ಪೌರಾಣಿಕ ಸನ್ನಿವೇಶಗಳನ್ನು ಇದು ಒಳಗೊಂಡಿದೆ. ಒಟ್ಟಾರೆ ಇದು ಜೀವನ ಮೌಲ್ಯಗಳ ಹೂರಣದಿಂದ ಕೂಡಿದೆ ಎಂದು ಜನಪದ ಕಲಾವಿದ ಗವಿಸಿದ್ಧಯ್ಯ ಹಳ್ಳಿಕೇರಿಮಠ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕ.ಸಾ.ಪ. ಕಾರ್ಯಾಲಯದಲ್ಲಿ ದಿ. ನಾರಾಯಣಭಟ್ ಶಿವಪೂರ ಇವರ ಸ್ಮರಣಾರ್ಥ ಏರ್ಪಡಿಸಿದ್ದ ದತ್ತಿ ಉಪನ್ಯಾಸದಲ್ಲಿ 'ಯುವಜನತೆ ಮತ್ತು ಜನಪದ ಸಾಹಿತ್ಯ' ಕುರಿತು ಮಾತನಾಡಿದರು.

ಕಸಾಪ ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ ನಾರಾಯಣಭಟ್ ಶಿವಪೂರ ಇವರ ಸಂಸ್ಮರಣೆ ಮಾಡಿ, ಶ್ರಮ ಸಂಸ್ಕೃತಿಯ ಮೂಲಕ ಗದಗ ಪರಿಸರದಲ್ಲಿ ಹೊಟೇಲ್ ಉದ್ಯಮವನ್ನು ಪ್ರಾರಂಭಿಸಿ ಮಾದರಿ ಜೀವನವನ್ನು ನಡೆಸಿದ್ದಾರೆ. ಕಲೆ, ಸಾಹಿತ್ಯ, ಸಂಸ್ಕೃತಿಯ ಬಗ್ಗೆ ಅಪಾರ ಒಲವನ್ನು ಹೊಂದಿದ್ದರು ಎಂದು ತಿಳಿಸಿದರು.





ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಶಿಷ್ಟ ಸಾಹಿತ್ಯದ ಉಗಮಕ್ಕೆ ಜನಪದವೇ ಮೂಲ. ಗ್ರಾಮೀಣ ಜನ ತಮ್ಮ ಜೀವನಾನುಭವಗಳನ್ನು ಎರಕ ಹೊಯ್ದು ಜನಪದ ಸಾಹಿತ್ಯವನ್ನು ಸೃಷ್ಟಿಸಿದ್ದಾರೆ. ಉತ್ತರಕರ್ನಾಟಕದ ಜನಪದ ಸಂಸ್ಕೃತಿ ವಿಶಿಷ್ಠವಾದುದು. ಜಾನಪದ ಪ್ರಕಾರಗಳ ಕಲಿಕೆ ಶಿಕ್ಷಣದ ಒಂದು ಭಾಗವಾಗಿ ಸರಕಾರ ಅಳವಡಿಸಿದಾಗ ಇಂದಿನ ಪೀಳಿಗೆ ಅರಿತುಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ನಾರಾಯಣಭಟ್ ಶಿವಪೂರ ಅವರ ಸಾಮಾಜಿಕ ಸೇವೆಯ ಕುರಿತು ಡಾ. ಆರ್.ಎನ್. ಗೋಡಬೋಲೆ, ಡಾ. ವಾಣಿ ಶಿವಪೂರ ಹಾಗೂ ಡಾ. ಅನಂತ ಶಿವಪೂರ ಮಾತನಾಡಿದರು.

ಈ ಸಂದರ್ಭದಲ್ಲಿ ಅಶೋಕ ಹಾದಿ ಅವರನ್ನು ಗೌರವಿಸಲಾಯಿತು. ಮಂಜುಳಾ ವೆಂಕಟೇಶಯ್ಯ ಕವನ ವಾಚಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ಡಾ. ಜಿ.ಬಿ. ಪಾಟೀಲ, ಸಿ.ಕೆ.ಎಚ್. ಕಡಣಿ ಶಾಸ್ತ್ರೀ, ಆರ್.ಡಿ. ಕಪ್ಪಲಿ, ಬಿ.ಬಿ. ಹೊಳಗುಂದಿ, ರತ್ನಕ್ಕ ಪಾಟೀಲ, ರಾಜೇಶ್ವರಿ ಬಡ್ನಿ, ಉಮಾದೇವಿ ಕಣವಿ, ಬಸವರಾಜ ಗಣಪ್ಪನವರ, ಯಲ್ಲಪ್ಪ ಹಂದ್ರಾಳ, ಪ್ರಸನ್ನಕುಮಾರ ಇನಾಮದಾರ, ಚಂದ್ರಶೇಖರ ಐಲಿ, ರಾಜಶೇಖರ ಕರಡಿ, ಮಲ್ಲಿಕಾರ್ಜುನ ನಿಂಗೋಜಿ, ಜೆ.ಎ. ಪಾಟೀಲ, ಅಶೋಕ ಸತ್ಯರೆಡ್ಡಿ, ಗಂಗವ್ವ ಮುದಗಲ್, ಚನವೀರಪ್ಪ ದುಂದೂರ, ಸತೀಶ ಕುಲಕರ್ಣಿ, ಬಿ.ಎಸ್. ಹಿಂಡಿ, ಶರಣಪ್ಪ ಹೊಸಂಗಡಿ, ಬಸವರಾಜ ನೆಲಜೇರಿ, ಅಂಬಿಕಾ ಶಿವಪೂರ, ಸತೀಶಕುಮಾರ ಚನ್ನಪ್ಪಗೌಡ್ರ, ಕೆ.ಎನ್. ಶಿವಪೂರ, ಕಾರ್ತಿಕ ಶಿವಪೂರ, ಸರಸ್ವತಿ ಶಿವಪೂರ, ಎಂ.ಎಫ್. ಡೋಣಿ ಮೊದಲಾದವರು ಭಾಗವಹಿಸಿದ್ದರು.

# ಅಂಗನವಾಡಿಗಳ ಪಾತ್ರ ಮಹತ್ವದ್ದು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಯತ್ನಳ್ಳಿ ಗ್ರಾಮದಲ್ಲಿ ನೂತನ ಅಂಗನವಾಡಿ ಕೇಂದ್ರ ಹಾಗೂ ಅರಿವು ಕೇಂದ್ರವನ್ನು ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ಗ್ರಾಮೀಣ ಭಾಗದ ಮಕ್ಕಳ, ಯುವಕರ ಶ್ರೇಯೋಭಿವೃದ್ಧಿಯಲ್ಲಿ ಅಂಗನವಾಡಿ-ಅರಿವು ಕೇಂದ್ರಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಗ್ರಾಮೀಣ ಜನರು ಸರ್ಕಾರದ ಈ ಮಹತ್ವಾಕಾಂಕ್ಷಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಸಿಡಿಪಿಓ ಮೃತ್ಯುಂಜಯ ಗಡ್ಡದನ್ವೇವರಿ, ಹನಮರಡ್ಡಿ ಫಕ್ಕೀರಡ್ಡಿ, ಎಸ್ ಹೊಂಬಳ, ಈರನಗೌಡ ಪಾಟೀಲ, ನಿರ್ಮಲಾ ಬೆಟದೂರ, ಗಂಗಾಧರ ಸಂಧಿಮನಿ, ಕವಿತಾ ಸಂಕನಗೌಡರ, ಮೌಲಾಸಾಬ ಪಿಂಜಾರ, ಬಸವರಡ್ಡಿ ಮರಡೂರ, ಹುಲಿಗೆಪ್ಪ ಕರೆಣ್ಣವರ, ಬಿಬಿಜಾನ ನದಾಫ್, ಚನ್ನವೀರಗೌಡ ಬೆಟ್ಟದೂರು, ಶಿವಯೋಗಿ ಹೊಸಕೇರಿ, ರೋಹನ್ ಕುಂದೇನಹಳ್ಳಿ, ಚಂದ್ರು ಎಸ್, ಪ್ರಭುಗೌಡ ಪಾಟೀಲ, ಶೇಖರಗೌಡ ಪಾಟೀಲ, ದ್ಯಾಮಣ್ಣ ಪೂಜಾರ ಮುಂತಾದವರು ಉಪಸ್ಥಿತರಿದ್ದರು.

# ಯೋಗ ಡಿಪ್ಲೋಮಾ ಪ್ರವೇಶ ಕಾಲಾವಕಾಶ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಸಂಯೋಜನೆಯಲ್ಲಿ ಬಸವ ಯೋಗ ಮಹಾವಿದ್ಯಾಲಯ ನಡೆಸುವ 2025-26ನೇ ಸಾಲಿನ ಯೋಗ ಡಿಪ್ಲೋಮಾ ಮತ್ತು ಯೋಗ ಸರ್ಟಿಫಿಕೇಟ್ ಪದವಿಗಳ ಪ್ರವೇಶ ಪಡೆಯಲು ಈ ಮೊದಲು ಕೊನೆಯ ದಿನಾಂಕ 17-10-2025 ಎಂದು ತಿಳಿಸಲಾಗಿತ್ತು.

ಈಗ ಕರ್ನಾಟಕ ವಿಶ್ವವಿದ್ಯಾಲಯದ ಆದೇಶ ಮೇರೆಗೆ ಯೋಗ ಸರ್ಟಿಫಿಕೇಟ್ ಮತ್ತು ಡಿಪ್ಲೋಮಾ ಕೋರ್ಸುಗಳ ಪ್ರವೇಶ ಅವಧಿಯನ್ನು 29-10-2025ರವರೆಗೆ ವಿಸತರಿಸಲಾಗಿದೆ. ಯೋಗ ಸರ್ಟಿಫಿಕೇಟ್ ಕೋರ್ಸ್ ಪ್ರವೇಶಕ್ಕೆ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಪಾಸಾಗಿರಬೇಕು. ಯೋಗ ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಯಾವುದೇ ಡಿಗ್ರಿ ಪಡೆದಿರಬೇಕು.

ಪ್ರವೇಶ ಅರ್ಜಿ ಮತ್ತು ಹೆಚ್ಚಿನ ಮಾಹಿತಿಗಾಗಿ -ಕೆ.ಎಸ್. ಪಲ್ಲೇದ, ಪ್ರಾಚಾರ್ಯರು ಎಸ್.ವಾಯ್.ಬಿ.ಎಂ. ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ, ಬಸವ ಪ್ರಭೆ ಕ್ಯಾಂಪಸ್, ಸಿದ್ಧಲಿಂಗ ನಗರ-ಗದಗ, ದೂರವಾಣಿ ಸಂಖ್ಯೆ 944831718 ಇಲ್ಲಿಗೆ ಸಂಪರ್ಕಿಸಬಹುದಾಗಿದೆ.


# ನಿಧನ

## ಮೋತಿಲಾಲಸಾ ಟಿ.ಮಿಸ್ಕಿನ್



**ಬೆಟಗೇರಿ:** ಹಿರಿಯ ನ್ಯಾಯವಾದಿ ಮೋತಿಲಾಲಸಾ ಟಿ.ಮಿಸ್ಕಿನ್ ಸೋಮವಾರ ಮಧ್ಯಾಹ್ನ ತಮ್ಮ 92ನೇ ವಯಸ್ಸಿನಲ್ಲಿ ನಿಧನರಾದರು. ಮೃತರು ಮೂವರು ಪುತ್ರರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಇವರ ಅಂತಿಮಯಾತ್ರೆಯು ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಬೆಟಗೇರಿಯ ರಾಜಾಜಿ ರೋಡ್, ಹೊಸಪೇಟ ಚೌಕ ಮೃತರ ಸ್ವಗೃಹದಿಂದ ಹೊರಡುವುದು.

## ಹೆಚ್.ಸಿ. ರಟಗೇರಿ



**ಲಕ್ಷ್ಮೇಶ್ವರ:** ಲಕ್ಷ್ಮೇಶ್ವರ ಸ್ಕೂಲ್ ಚಂದನದ ನಿರ್ದೇಶಕರಾಗಿದ್ದ ನಿವೃತ್ತ ಶಿಕ್ಷಕ ಹೆಚ್.ಸಿ. ರಟಗೇರಿ (89) ಸೋಮವಾರ ತೀವ್ರ ಹೃದಯಾಘಾತದಿಂದ ನಿಧನ ಹೊಂದಿದರು. ಲಕ್ಷ್ಮೇಶ್ವರ ಸಮೀಪದ ಹರ್ಲಾಪುರ (ಕುಂದಗೋಳ ತಾಲೂಕು) ಗ್ರಾಮದವರಾದ ಇವರಿಗೆ ಹುಬ್ಬಳ್ಳಿಯ ಖ್ಯಾತ ಮಕ್ಕಳ ತಜ್ಞ ಡಾ. ವಿನೋದ ರಟಗೇರಿ ಸೇರಿ ಐವರು ಪುತ್ರರಿದ್ದಾರೆ.

ಸಂತಾಪ: ಭಾರತ ರತ್ನ ಪ್ರೊ. ಸಿ.ಎನ್. ಆರ್ ರಾವ್, ಇಸ್ರೋದ ಎ.ಎಸ್. ಕಿರಣಕುಮಾರ, ಗುರುರಾಜ ಕರ್ಜಗಿ, ವಿ.ಪಿ. ಬಳಿಗಾರ, ಮನು ಬಳಿಗಾರ, ಟಿ.ಈಶ್ವರ ಸೇರಿದಂತೆ ಅನೇಕ ಗಣ್ಯರು, ಶಿಷ್ಯ ವೃಂದದವರು ಸಂತಾಪ ಸೂಚಿಸಿದ್ದಾರೆ.

# ಬೆಳಕಿನ ಹಬ್ಬದ ಸಂಭ್ರಮಕ್ಕೆ ಸಿದ್ಧ

▸▸ಮೊದಲನೇ ಪುಟದಿಂದ



ಅಂಗಡಿಗಳಲ್ಲಿ ಅಮವಾಸ್ಯೆ ಪೂಜೆ ಮಾಡಿದರು. ಮಂಗಳವಾರ ವ್ಯಾಪಾರಸ್ಥರು ಅಂಗಡಿಗಳಲ್ಲಿ ಮಹಾಲಕ್ಷ್ಮೀ ಪೂಜೆ ಮಾಡಿದರೆ ರೈತರು ತಮ್ಮ ವಾಹನಾದಿಗಳನ್ನು ಪೂಜಿಸುತ್ತಾರೆ. ಬುಧವಾರ ದೀಪಾವಳಿ ಪಾಡ್ಯ ಆಚರಣೆಗೆ ಎಲ್ಲರ ಮನೆ ಮತ್ತು ಅಂಗಡಿಗಳಲ್ಲಿ ಧನಲಕ್ಷ್ಮೀ ಪೂಜೆ ಮತ್ತು ವಾಹನಗಳಿಗೆ ಪೂಜೆ, ಉಡಿ ತುಂಬುವ ಮತ್ತು ಹಟ್ಟಿ ಪೂಜೆಗೆ ಸಕಲ ಸಿದ್ಧತೆಯೊಂದಿಗೆ ಸಂಭ್ರಮದಲ್ಲಿದ್ದಾರೆ.

ಬೆಳಕಿನ ಹಬ್ಬ ದೀಪಾವಳಿ ಹಬ್ಬದ ಸಡಗರ-ಸಂಭ್ರಮ ಎಲ್ಲರ ಮನೆ-ಮನಗಳಲ್ಲಿ ಪ್ರಜ್ವಲಿಸುತ್ತಿದೆ. ಈ ದೀಪದ ಹಬ್ಬ ಅಜ್ಞಾನದ ಕತ್ತಲೆ ಕಳೆದು ಸುಜ್ಞಾನದ ಬೆಳಕು ಪಸರಿಸಲಿ. ಎಲ್ಲ ಬಾಳಲಿ ಶಾಂತಿ, ಸಂತೋಷ, ಸಮೃದ್ಧಿ ತರಲಿ. ಮಕ್ಕಳನ್ನು ಪಟಾಕಿ ಅಪಾಯದಿಂದ ದೂರವಿರಿಸಿ ಅದಕ್ಕಾಗಿ ಹಸಿರು ಪಟಾಕಿ ಬಳಸಿ, ಮಣ್ಣಿನ ಹಣತೆಯಲ್ಲಿ ದೀಪ ಬೆಳಗಿಸಿ, ಪರಿಸರ ಕಾಪಾಡಿ ಎಂಬುದು ನಮ್ಮ ಕಳಕಳಿ.

# ಸಚಿವ ಪ್ರಲ್ಹಾದ ಜೋಷಿ ಅವರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಪಶ್ಚಿಮ ಪದವೀಧರ ಚುನಾವಣೆ 2026ರ ಮತದಾರರ ನೋಂದಣಿ ಜಾಗೃತಿಯ ಅಭಿಯಾನವನ್ನು ಕೈಗೊಂಡಿರುವ ಗದುಗಿನ ನಿತ್ಯವಿಜಯ ಪ್ರತಿಷ್ಠಾನದ ಸಂಸ್ಥಾಪಕರು, ಬಿಜೆಪಿಯ ವೈದ್ಯಕೀಯ ಪ್ರಕೋಷ್ಠದ ರಾಜ್ಯ ಸದಸ್ಯರಾದ ಡಾ. ಎಸ್.ವ್ಹಿ. ಶಿವನಗೌಡರ ಅವರ ನೇತೃತ್ವದ ತಂಡವು ಗದಗ ಹಾಗೂ ಹುಬ್ಬಳ್ಳಿಯ ವಿವಿಧೆಡೆ ಮತದಾರರ ನೋಂದಣಿ ಕುರಿತು ಜಾಗೃತಿ ಮೂಡಿಸಿತು.

ಹುಬ್ಬಳ್ಳಿಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಷಿ ಅವರ ಕಾರ್ಯಾಲಯಕ್ಕೆ ಭೇಟಿ ನೀಡಿದ ತಂಡವು ಅವರನ್ನು ಸನ್ಮಾನಿಸಿ ಗೌರವಿಸಿತು. ಈ ಸಂದರ್ಭದಲ್ಲಿ ಔಪಚಾರಿಕವಾಗಿ ಮಾತನಾಡಿದ ಪ್ರಲ್ಹಾದ ಜೋಷಿ ಅವರು, ಮತದಾರರ ನೋಂದಣಿ ಜಾಗೃತಿ ಅಭಿಯಾನವು ಮತಕ್ಷೇತ್ರದ ಎಲ್ಲೆಡೆಯೂ ನಡೆಯುವಂತಾಗಲಿ. ಬಿಜೆಪಿಯ ಕಾರ್ಯಕರ್ತರು ಈ ಕಾರ್ಯವನ್ನು ಯಶಸ್ವಿಗೊಳಿಸಿ ಹೆಚ್ಚಿನ ಪ್ರಮಾಣದಲ್ಲಿ ನೋಂದಣಿ ಮಾಡಿಸಬೇಕೆಂದರಲ್ಲದೆ, ಡಾ. ಎಸ್.ವ್ಹಿ. ಶಿವನಗೌಡರ ನೇತೃತ್ವದಲ್ಲಿ ಈ ಕಾರ್ಯಕ್ಕೆ ಮುಂದಾಗಿರುವ ತಂಡದ ಕಾರ್ಯ ಅಭಿನಂದನೀಯ ಎಂದರು.



# ಕಸಾಪ ತಾಲೂಕಾಧ್ಯಕ್ಷರ ಬದಲಾವಣೆಗೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ಕನ್ನಡ ಸಾಹಿತ್ಯ ಪರಿಷತ್ತು ಯಾವುದೇ ಚಟುವಟಿಕೆಗಳಿಲ್ಲದೆ ಸಂಪೂರ್ಣವಾಗಿ ನಿಷ್ಕ್ರಿಯಗೊಂಡಿದೆ. ಈ ಹಿಂದೆ ದಿ. ಐ.ಎ. ರೇವಡಿಯವರು ಎಲ್ಲರನ್ನೊಳಗೊಂಡಂತೆ ಕ್ರಿಯಾಶೀಲವಾಗಿ ತಾಲೂಕಿನಲ್ಲಿ ಸಂಚರಿಸಿ ಸಾಹಿತ್ಯ ಚಟುವಟಿಕೆಗಳನ್ನು ನಡೆಸುತ್ತಿದ್ದರು. ಇದೀಗ ಪ್ರಸ್ತುತ ಅಧ್ಯಕ್ಷರ ಅವಧಿಯಲ್ಲಿ ಇದುವರೆಗೂ ಅಜೀವ ಸದಸ್ಯರ ಸಭೆ, ಕಾರ್ಯಕಾರಿ ಮಂಡಳಿ ಸದಸ್ಯರ ಸಭೆಗಳು ನಡೆಯದೆ ಕಾಟಾಚಾರಕ್ಕೆ ಇದ್ದಂತಾಗಿದೆ ಎಂದು ಕಸಾಪ ಅಜೀವ ಸದಸ್ಯ ಹಾಗೂ ತಾಲೂಕು ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಹೇಳಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಇವರ ಅಧಿಕಾರಾವಧಿಯಲ್ಲಿ ಯಾರಿಗೆಲ್ಲ ಅವಕಾಶ ನೀಡಲಾಗಿದೆ, ಯಾವ ಸಾಹಿತಿ-ಬರಹಗಾರರಿಗೆ ಸೂಕ್ತ ವೇದಿಕೆ ಕಲ್ಪಿಸಿಕೊಟ್ಟಿದ್ದಾರೆ ತಿಳಿಸಲಿ. ಯಾವುದೇ ಚಟುವಟಿಕೆಗಳನ್ನು ಮಾಡದ ಅಧ್ಯಕ್ಷರನ್ನು ಯಾಥಾಸ್ಥಿತಿ ಮುಂದುವರೆಸುತ್ತಾ ಸಾಗಿರುವ ಕಸಾಪ ಜಿಲ್ಲಾಧ್ಯಕ್ಷರು ಕೂಡಲೇ ಈ ಬಗ್ಗೆ ಗಮನ ಹರಿಸಬೇಕು.

ಗಜೇಂದ್ರಗಡದಲ್ಲಿಯೇ ಗದಗ ಜಿಲ್ಲಾ 10ನೇ ಸಮ್ಮೇಳನ ಹಾಗೂ ಗಜೇಂದ್ರಗಡ ತಾಲೂಕು ಪ್ರಥಮ ಸಮ್ಮೇಳನ ನಡೆದು ಇದೀಗ ವರ್ಷ ಕಳೆಯುತ್ತಾ ಬಂದರೂ ಇದುವರೆಗೂ ಲೆಕ್ಕಪತ್ರ ಮಂಡಿಸಿಲ್ಲ. ಆದ್ದರಿಂದ, ಕಸಾಪ ಜಿಲ್ಲಾಧ್ಯಕ್ಷರು ಇತ್ತ ಗಮನ ಹರಿಸಬೇಕೆಂದು ಒತ್ತಾಯಿಸಿದ್ದಾರೆ.













VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka